# ಹಂಪಿ ಟೈಮ್ಸ್

HAMPI TIMES
KANNADA DAILY
ಕನ್ನಡ ದಿನಪತ್ರಿಕೆ

ಸಂಪಾದಕ: ಬಸಾಪುರ ಬಸವರಾಜ
EDITOR: BASAPUR BASAVARAJA

epaper.hampitimes.com | e-mail: hampitimes@gmail.com | M:94486 33038 Reg.No.PMG/KA/NK/BLY/01/2024-2026

ಸಂಪುಟ:02 • ಸಂಚಿಕೆ: 287 • ಪಿ.ಆರ್.ಜಿ.ಐ.ನಂ.:KARKAN/2023/88055 • ವಿಜಯನಗರ • 24.05.2025 • ಶನಿವಾರ • ಪುಟ:04 • ಬೆಲೆ:2
Volume:02 • Issue: 287 • PRGI No:KARKAN/2023/88055 • VIJAYANAGARA • 24.05.2025 • Saturday • Page:04 • Rs:2




HAMPI TIMES
PRINT & DIGITAL
Daily NEWS PAPER
To book Classified
Display Ad in
HAMPI TIMES
Please call on
9448633038
Bring your product to local hearts







# ಇಳುವರಿ ಹೆಚ್ಚಳಕ್ಕೆ ಸಾವಯವ ಗೊಬ್ಬರ ಬಳಸಿ

## ಕಾಳಿನ ತೂಕ ಹೆಚ್ಚಿಸಲು ಯೂರಿಯಾ ಹಾಗೂ ಡಿ.ಎ.ಪಿ.ಯಲ್ಲಿ ಪೊಟ್ಯಾಷ್ ಲಭ್ಯವಿರುವುದಿಲ್ಲ

## ಕೃಷಿ ಇಲಾಖೆ ಜೆಡಿ ಶರಣಪ್ಪ ಮುದಗಲ್ ಸಲಹೆ | ಮಣ್ಣು ಪರೀಕ್ಷೆ ನಂತರ ಬೆಳೆ ಬೆಳೆಯಿರಿ

**ಹಂಪಿ ಟೈಮ್ಸ್ ಹೊಸಪೇಟೆ**

ರೈತರು ಉತ್ತಮ ಇಳುವರಿ ಪಡೆಯಲು ಡಿಎಪಿ ಗೊಬ್ಬರಕ್ಕೆ ಪರ್ಯಾಯವಾಗಿ ಸಂಯುಕ್ತ ರಸಗೊಬ್ಬರ ಬಳಸಲು ಮುಂದಾಗಬೇಕು. ಸಸ್ಯಗಳ ಬೆಳವಣಿಗೆ ಮತ್ತು ಅಭಿವೃದ್ಧಿಗೆ ಹದಿನೇಳು ಪೋಷಕಾಂಶಗಳ ಅಗತ್ಯವಿರುತ್ತದೆ ಎಂದು ಕೃಷಿ ಇಲಾಖೆ ಜಂಟಿ ನಿರ್ದೇಶಕ ಶರಣಪ್ಪ ಮುದಗಲ್ ತಿಳಿಸಿದ್ದಾರೆ.

ಪ್ರಮುಖವಾಗಿ ಇವುಗಳಲ್ಲಿ ಇಂಗಾಲ, ಜಲಜನಕ ಮತ್ತು ಆಮ್ಲಜನಕವು ಸ್ವಾಭಾವಿಕವಾಗಿ ದೊರೆಯಲಿದ್ದು, ಗಾಳಿ ಮತ್ತು ನೀರಿನ ಮೂಲಕ ಸಸ್ಯಗಳಿಗೆ ಲಭ್ಯವಾಗುತ್ತವೆ. ಉಳಿದ ಹದಿನಾಲ್ಕು ಪೋಷಕಾಂಶಗಳಲ್ಲಿ ಸಾರಜನಕ, ರಂಜಕ, ಪೊಟ್ಯಾಶ್ ಹೆಚ್ಚಿನ ಪ್ರಮಾಣದಲ್ಲಿ ಬೇಕಾಗಿದ್ದು, ಇವುಗಳನ್ನು ಪ್ರಧಾನ ಪೋಷಕಾಂಶಗಳೆಂದು ಹಾಗೂ ಕಾಲ್ಸಿಯಂ, ಮೆಗ್ನೀಷಿಯಂ, ಗಂಧಕ, ಕಬ್ಬಿಣ, ಜಿಂಕ್, ಬೋರಾನ್, ತಾಮ್ರ, ಮ್ಯಾಂಗನೀಸ್, ಮಾಲಿಬಿನಂ. ಕ್ಲೋರಿನ್ಮತ್ತುನಿ ಕಡಿಮೆ ಪ್ರಮಾಣದಲ್ಲಿ ಬೇಕಿದ್ದು ಇವುಗಳನ್ನು ಲಘುಪೋಷಕಾಂಶಗಳೆಂದು ವಿಂಗಡಿಸಲಾಗಿದೆ.

ಇವುಗಳಲ್ಲಿ ಯಾವುದೇ ಒಂದು ಪೋಷಕಾಂಶದ ಕೊರತೆಯಾದರೂ ಸಸ್ಯಗಳ ಬೆಳವಣಿಗೆ ಮತ್ತು ಅಭಿವೃದ್ಧಿಯ ಮೇಲೆ ಪರಿಣಾಮ ಬೀರಿ ಇಳುವರಿ ಕುಂಠಿತವಾಗುತ್ತದೆ. ಪ್ರಧಾನ ಪೋಷಕಾಂಶಗಳು ಮತ್ತು ಲಘು ಪೋಷಕಾಂಶಗಳಿಗೆ ಭೂಮಿಯೇ ಮುಖ್ಯ ಅಧಾರ. ಮಣ್ಣಿನಿಂದ ಈ ಎಲ್ಲಾ ಪೋಷಕಾಂಶಗಳು ಬೆಳೆಗಳಿಗೆ ಬೇಕಾದ ಪ್ರಮಾಣದಲ್ಲಿ ದೊರೆಯುವುದಿಲ್ಲವಾದ್ದರಿಂದ ಬಾಹ್ಯವಾಗಿ ನೀಡುವುದು ಅನಿವಾರ್ಯ. ಬೆಳೆಗಳಿಗೆ



ಬೇಕಾಗುವ ಈ ಬಾಹ್ಯ ಪೋಷಕಾಂಶಗಳನ್ನು ಸಾವಯವ (ಕೊಟ್ಟಿಗೆ ಗೊಬ್ಬರ, ಹಸಿರೆಲೆ ಗೊಬ್ಬರ, ಹಿಂಡಿ ಇತ್ಯಾದಿ) ಮತ್ತು ರಸಗೊಬ್ಬರಗಳಿಂದ ಒದಗಿಸಬೇಕಾಗಿದೆ.

ರೈತರು ರಸಗೊಬ್ಬರಗಳನ್ನು ಬಳಸುವಾಗ ಕೆಲವು ಕ್ರಮಗಳನ್ನು ಅನುಸರಿಸಬೇಕಿದೆ. ರೈತರು ಕೇವಲ ಒಂದು ಅಥವಾ ಎರಡು ಪೋಷಕಾಂಶ ಒದಗಿಸುವ ಯೂರಿಯಾ ಹಾಗೂ ಡಿ.ಎ.ಪಿ.ಯನ್ನು ರೂಢಿಗತವಾಗಿ ಬಳಸುತ್ತಿದ್ದು, ಇವುಗಳಲ್ಲಿ ಸಾರಜನಕ ಮತ್ತು ರಂಜಕದ ಅಂಶ ಮಾತ್ರವಿರುತ್ತದೆ. ಆದರೆ, ಬೆಳೆಗಳಿಗೆ ಬರ ಮತ್ತು ರೋಗ ನಿರೋಧಕ ಶಕ್ತಿ ನೀಡಿ ಕಾಳಿನ ತೂಕ ಹೆಚ್ಚಿಸಲು ಅತ್ಯಂತ ಅವಶ್ಯಕವಾಗಿರುವ ಪೊಟ್ಯಾಷ್ ಲಭ್ಯವಿರುವುದಿಲ್ಲ. ಮಾರುಕಟ್ಟೆಯಲ್ಲಿ ವಿವಿಧ ಶ್ರೇಣಿಯ(ಗ್ರೇಡ್) ಸಾರಜನಕ, ರಂಜಕ ಮತ್ತು ಪೊಟ್ಯಾಷ್ಯುಕ್ತ ಬಹಳಷ್ಟು ರಸಗೊಬ್ಬರಗಳು ಲಭ್ಯವಿದ್ದು, ಶಿಫಾರಸ್ಸಿನಂತೆ ವಿವಿಧ ರಸಗೊಬ್ಬರಗಳ ಸಂಯೋಜನೆಯೊಂದಿಗೆ ಬಳಸಬಹುದಾಗಿದೆ. ಶಿಫಾರಸ್ಸಿನಂತೆ ಬೆಳೆಗಳಿಗೆ ಸಾರಜನಕ : ರಂಜಕ : ಪೊಟ್ಯಾಷ ರಸಗೊಬ್ಬರಗಳನ್ನು 4:2:1 ರ ಅನುಪಾತದಲ್ಲಿ ಬಳಸಬೇಕಾಗಿರುತ್ತದೆ. ಆದರೆ ಇತ್ತೀಚಿನ ವರ್ಷಗಳಲ್ಲಿ ರೈತರು ಬಳಸುತ್ತಿರುವ ರಸಗೊಬ್ಬರಗಳ ಅನುಪಾತವು ಜಿಲ್ಲೆಯಲ್ಲಿ 17:7:1 ಆಗಿರುತ್ತದೆ. ಆದ್ದರಿಂದ ರೈತರು ಸಮತೋಲನಾತ್ಮಕ ರಸಗೊಬ್ಬರಗಳ ಬಳಕೆಯನ್ನು ಮಾಡಲು ವಿನಂತಿಸಿದೆ.

ರೈತರು ರಸಗೊಬ್ಬರವನ್ನು ಕೇವಲ ಒಂದೇ ಸಂಸ್ಥೆಯ ಅಥವಾ ಒಂದೇ ರಸಗೊಬ್ಬರಕ್ಕೆ ಆದ್ಯತೆ ನೀಡದೆ, ಡಿ.ಎ.ಪಿ ರಸಗೊಬ್ಬರಕ್ಕೆ ಪರ್ಯಾಯವಾಗಿ ಗಂಧಕ ಒದಗಿಸುವ 20:20:0:13 ಹಾಗೂ ಪೊಟ್ಯಾಷ್ ಒದಗಿಸುವ ಇತರೆ ಸಂಯುಕ್ತ ರಸಗೊಬ್ಬರಗಳಾದ 15:15:15, 10.26.26, 12:32:16, 17:17:17. 19:19:19, ಇತ್ಯಾದಿ ರಸಗೊಬ್ಬರಗಳನ್ನೂ ಸಹ ಬಳಸಬಹುದಾಗಿದೆ.

ಮಣ್ಣು ಪರೀಕ್ಷೆ ಆಧಾರದ ಮೇಲೆ ರಸಗೊಬ್ಬರಗಳನ್ನು ಬಳಸಬೇಕು. ಬೆಳೆಗಳಿಗೆ ಅವಶ್ಯಕ ಅವಧಿಯಲ್ಲಿ ರಸಗೊಬ್ಬರಗಳನ್ನು ಬಳಸುವುದು ಉತ್ತಮ. ಹೆಚ್ಚಿನ ಪ್ರಮಾಣದಲ್ಲಿ ಸಾವಯವ ಗೊಬ್ಬರಗಳನ್ನು ಬಳಸುವುದು ಸೂಕ್ತವಾಗಿದೆ. ಹೆಚ್ಚಿನ ಮಾಹಿತಿಗಾಗಿ ರೈತರು ತಮ್ಮ ಸಮೀಪದ ರೈತ ಸಂಪರ್ಕ ಕೇಂದ್ರ ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಭೇಟಿ ನೀಡುವಂತೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ

# ಎಸ್ಸೆಸ್ಸೆಲ್ಸಿ ಪರೀಕ್ಷೆ–2 ಸುಗಮವಾಗಿ ನಡೆಸಲು ಸಕಲ ಸಿದ್ಧತೆ

## ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ್ ಹೇಳಿಕೆ | ಮೇ 26 ರಿಂದ ಜೂ.2ರವರೆಗೆ

**ಹಂಪಿ ಟೈಮ್ಸ್ ಹೊಸಪೇಟೆ**



ಜಿಲ್ಲೆಯಲ್ಲಿ ಒಟ್ಟು 23 ಪರೀಕ್ಷಾ ಕೇಂದ್ರಗಳಲ್ಲಿ 2ನೇ ಎಸ್ಎಸ್ಎಲ್ಸಿ ಪರೀಕ್ಷೆಗಳು ಮೇ.26 ರಿಂದ ಜೂ.2 ರವರೆಗೆ ಸುಗಮವಾಗಿ ನಡೆಯಲು ಎಲ್ಲಾ ರೀತಿ ಸಕಲ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ್ ತಿಳಿಸಿದ್ದಾರೆ.

ಎಸ್ಎಸ್ಎಲ್ಸಿ ಪರೀಕ್ಷೆಗಳು ಪಾರದರ್ಶಕವಾಗಿ, ಕಟ್ಟುನಿಟ್ಟಾಗಿ, ಸುಗಮವಾಗಿ ನಡೆಸುವ ಹಿತದೃಷ್ಟಿ ಯಿಂದ ಎಲ್ಲಾ ಪರೀಕ್ಷಾ ಕೇಂದ್ರಗಳಿಗೆ ವೀಕ್ಷಕರನ್ನು ನೇಮಕ ಮಾಡಲಾಗಿದೆ. ಅಧಿಕಾರಿಗಳು ಪರೀಕ್ಷಾ ವೇಳಾ ಪಟ್ಟಿಯಂತೆ ನಿಯೋಜಿಸಿದ ಕೇಂದ್ರಗಳಲ್ಲಿ ಪರೀಕ್ಷಾ ಪೂರ್ವ ಸಿದ್ಧತೆಯನ್ನು ಮಾಡಿಕೊಂಡಿರುವ ಬಗ್ಗೆ ಖಚಿತ ಪಡಿಸಿಕೊಂಡು ಮೂಲಭೂತ ಸೌಕರ್ಯಗಳಾದ ಆಸನ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ, ಗಾಳಿ ಮತ್ತು ಬೆಳಕಿನ ವ್ಯವಸ್ಥೆಗಳನ್ನು ಒದಗಿಸಿಕೊಂಡಿರುವ ಬಗ್ಗೆ ಪರಿಶೀಲಿಸಿಕೊಳ್ಳಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯುವತಿಗೆ 18 ವರ್ಷದ ನಂತರ ಮದುವೆ ತಾಯಿ ಮರಣ ತಡೆಗಟ್ಟಲು ಸಹಕಾರಿ

## ಪರಿಣಾಮಕಾರಿ ಜಾಗೃತಿಗೆ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಸೂಚನೆ



**ಹಂಪಿ ಟೈಮ್ಸ್ ಬಳ್ಳಾರಿ**

ಹೆಣ್ಣು ಮಕ್ಕಳಿಗೆ ಮದುವೆಯ ವಯಸ್ಸು 18 ಆಗಿರಬೇಕು. ಇದರ ಅವಶ್ಯಕತೆ ಮತ್ತು ಮಹತ್ವದ ಬಗ್ಗೆ ಪಾಲಕರಿಗೆ ತಿಳಿಸುವ ಮೂಲಕ ಗರ್ಭಿಣಿ ಅವಧಿಯ ಗಂಡಾಂತರಗಳನ್ನು ದೂರಗೊಳಿಸಲು ಅರಿವು ಮೂಡಿಸುವ ಕಾರ್ಯವಾಗಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜರುಗಿದ ಜಿಲ್ಲಾ ಆರೋಗ್ಯ ಅಭಿಯಾನದ ಅಂತರ್ ಇಲಾಖೆ ಸಭೆಯಲ್ಲಿ ಅವರು ಮಾತನಾಡಿದರು. ಶಿಶು ಜನನದ ನಂತರ ಉಂಟಾಗಬಹುದಾದ ತಾಯಿ ಮರಣಗಳನ್ನು ತಡೆಗಟ್ಟಲು ಪಾಲಕರಿಗೆ ಹೆಣ್ಣು ಮಗುವಿಗೆ 18 ವರ್ಷಗಳ ನಂತರ ಮದುವೆ ಮಾಡುವುದರ ಬಗ್ಗೆ ಮನದಟ್ಟು ಮಾಡಿಕೊಡಬೇಕು. ತಾಯ್ತನದ ಜವಾಬ್ದಾರಿ ಹಾಗೂ ವೈಜ್ಞಾನಿಕವಾಗಿ ಗರ್ಭಕೋಶದ ಸಂಪೂರ್ಣ ಬೆಳವಣಿಗೆ ಮಹತ್ವ ಸಹ ತಿಳಿಸುವ ಮೂಲಕ ಹೆಣ್ಣುಮಕ್ಕಳ ಕನಿಷ್ಠ 20 ವರ್ಷ ವಯಸ್ಸಿನ ನಂತರದ ಅವಧಿ ಗರ್ಭವತಿಯಾಗಲು ಸೂಕ್ತ ಸಮಯ ಎಂದು ಸಮುದಾಯದಲ್ಲಿ ಜಾಗೃತಿ ನೀಡುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಜಿಲ್ಲೆಯಲ್ಲಿ ಗರ್ಭಿಣಿ ಮತ್ತು ಬಾಣಂತಿಯರ ಮರಣವನ್ನು ಶೂನ್ಯಕ್ಕೆ ತರಲು ಗರ್ಭಿಣಿ ಎಂದು ನೋಂದಣಿ >>4

---

ಮನಸ್ಸು ಎಲ್ಲದಕ್ಕೂ ಮೂಲ,
ಅದನ್ನು ಸರಿಪಡಿಸಿಕೊಳ್ಳದ ಹೊರತು
ಇನ್ನಾವುದು ಸರಿಯಾಗದು
– ಡಿ.ವಿ.ಜಿ


ಹಂಪಿ ಟೈಮ್ಸ್
SCAN TO WATCH

SSLC ಹೈಸ್ಕೋರ್ ಸೀಕ್ರೇಟ್ ಏನು ಗೊತ್ತಾ ಟಾಪರ್ ಇಂದುಶ್ರೀ ಮಾತಲ್ಲೇ ಕೇಳಿ...


ದೇವಾಲಯ ದರ್ಶನ



ಹಂಪಿ ಶ್ರೀ ವಿರೂಪಾಕ್ಷೇಶ್ವರ ದರ್ಶನ

ನಿತ್ಯ ಅಭಿಷೇಕ ಸಮಯ
ಬೆಳಿಗ್ಗೆ: 6:30, 10:30 ಸಂಜೆ 6:30ಕ್ಕೆ

–: ದರ್ಶನ ಸಮಯ :–
ಬೆಳಿಗ್ಗೆ 6.30 ರಿಂದ ಮಧ್ಯಾಹ್ನ 1.15ರವರೆಗೆ
ಮಧ್ಯಾಹ್ನ 3 ರಿಂದ ರಾತ್ರಿ 7.30ರವರೆಗೆ

# ಬೀಜ - ಗೊಬ್ಬರ ಕೃತಕ ಅಭಾವ ಸೃಷ್ಠಿಸಿದಲ್ಲಿ ಕಠಿಣ ಕ್ರಮ : ಡಿಸಿ



**ಹಂಪಿ ಟೈಮ್ಸ್ ದಾವಣಗೆರೆ**

ಮುಂಗಾರು ಮಳೆ ಉತ್ತಮ ಆರಂಭವಾಗಿದ್ದು, ರೈತರು ಬಿತ್ತನೆ ಕಾರ್ಯ ಚುರುಕುಗೊಳಿಸಿದ್ದಾರೆ. ಆದ್ದರಿಂದ ವರ್ತಕರು ರೈತರಿಗೆ ಬೇಕಾದ ಬಿತ್ತನೆ ಬೀಜ ಹಾಗೂ ರಸಗೊಬ್ಬರ ಸಾಕಷ್ಟು ದಾಸ್ತಾನಿದೆ. ಆದರೂ ಕೃತಕ ಅಭಾವ ಸೃಷ್ಠಿಸಿ, ಕಾಳ ಸಂತೆಯಲ್ಲಿ ಮಾರಾಟ ಮಾಡುವುದು ಕಂಡುಬಂದಲ್ಲಿ ಅಂತಹವರ ವಿರುದ್ಧ ನಿರ್ಧಾಕ್ಷಿಣ್ಯವಾಗಿ ಕಠಿಣ ಕ್ರಮಕೈಗೊಳ್ಳಲಾಗುವುದು ಎಂದು ಜಿಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಕಟ್ಟುನಿಟ್ಟಿನ ಸೂಚನೆ ನೀಡಿದರು. ರೈತರು ಡಿಎಪಿ ಗೊಬ್ಬರದ ಬದಲಾಗಿ ಗಂಧಕಯುಕ್ತ ಗೊಬ್ಬರ ಬಳಸಿದರೆ ಉತ್ತಮ ಇಳುವರಿ ಕಾಣಬಹುದು. ರೈತರು ಸಹ ಉತ್ತಮ ಗುಣಮಟ್ಟದ ಬೀಜಗಳನ್ನು ರೈತ ಸಂಪರ್ಕ ಕೇಂದ್ರಗಳಲ್ಲಿಯೇ ಖರೀದಿಸಬೇಕು. ಉತ್ಪನ್ನಗಳನ್ನು ಖರೀದಿಸಿದ ರಶೀದಿಗಳನ್ನು ಬೆಳೆ ಕಟಾವು ಮಾಡುವವರೆಗೂ ಜಾಗೃತವಾಗಿ ಇಟ್ಟುಕೊಂಡಿರಬೇಕು. ಬೀಜ ಗೊಬ್ಬರಗಳಲ್ಲಿ ಲೋಪದೋಷಗಳು ಕಂಡುಬಂದಲ್ಲಿ ಸಂಬಂದಪಟ್ಟವರ ಮೇಲೆ ಕ್ರಮಕೈಗೊಂಡು ಸೂಕ್ತ ಪರಿಹಾರ ಕಂಡುಕೊಳ್ಳಲಾಗುವುದು ಎಂದರು.

**ಜೂನ್ 5 ರಿಂದ ಜಿಲ್ಲಾಧಿಕಾರಿಗಳ ಕಚೇರಿ ಇನ್ನೂ ಪ್ಲಾಸ್ಟಿಕ್ ಮುಕ್ತ :** ಮುಂಬರುವ ಜೂನ್ 5 ರಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಪ್ಲಾಸ್ಟಿಕ್ ಬಳಕೆ ಸಂಪೂರ್ಣ ನಿಷೇಧಿಸಿ ಪ್ಲಾಸ್ಟಿಕ್ ಮುಕ್ತ ಕಚೇರಿ ಎಂದು ಘೋಷಿಸಲಾಗುವುದು. ಜಿಲ್ಲೆಯ ವ್ಯಾಪ್ತಿಯಲ್ಲಿನ ಶಾಲಾ ಕಾಲೇಜು ವ್ಯಾಪ್ತಿಯ ಸು.100 ಮೀ ವ್ಯಾಪ್ತಿಯಲ್ಲಿ ಪ್ಲಾಸ್ಟಿಕ್ ಇನ್ನಿತರೆ ತ್ಯಾಜ್ಯವನ್ನು ಸ್ವಚ್ಛಗೊಳಿಸಿ ನಗರಸಭೆಗೆ ನೀಡಲಿದ್ದಾರೆ. ಅಂಗಡಿ ಮುಂಗಟ್ಟುಗಳಲ್ಲಿ ಮುಂತಾದೆಡೆ ಪ್ಲಾಸ್ಟಿಕ್ ಮಾರಾಟ ಅಥವಾ ಬಳಕೆ ಮಾಡುವುದು ಕಂಡುಬಂದಲ್ಲಿ ಅಧಿಕ ದಂಡ ವಿಧಿಸುವುದಲ್ಲದೇ ಸೂಕ್ತ ಕ್ರಮಕೈಗೊಳ್ಳಲಾಗುವುದು ಎಂದು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.


ಹಂಪಿ ಟೈಮ್ಸ್ SSLC
ಮಾರ್ಗದರ್ಶಿ ಇ-ಪೇಪರ್
ಕೆಳಗಿನ ವೆಬ್‌ಸೈಟ್‌ಗೆ ಭೇಟಿ ನೀಡಿ..
www.hampitimes.com/ epaper.hampitimes.com



ಹಂಪಿ ಟೈಮ್ಸ್
ವಿಜಯನಗರದ ಹೆಮ್ಮೆ ಕನ್ನಡ ದಿನ ಪತ್ರಿಕೆ
Searching for the perfect platform to promote your brand?
Want to reach more people?
Choose HAMPI TIMES
Scan to read epaper

HAMPI TIMES
Kannada Daily News paper
Print & Digital Edition
Contact : 94486 33038
E-mail: hampitimes@gmail.com
www.hampitimes.com

# ಮಾತನಾಡದ ಚುಕ್ಕಿ

■ ಶೇಖರಯ್ಯ ಟಿ.ಎಚ್.ಎಂ ಕೂಡ್ಲಿಗಿ



ರಾತ್ರಿ ಮಬ್ಬುಗತ್ತಲು, ಹೇಳಿಕೇಳಿ ಮಳೆಗಾಲ, ಧೋ ಧೋ ಸುರಿಯುತ್ತಿರುವ ಮಳೆ, ಮಳೆಯ ರಭಸಕ್ಕೆ ಮಾಳಿಗೆಯ ಮನೆಗಳು ಜಂತವಾನ ಹಿಡಿದಿವೆ. ಮನೆಯ ಯಾವ ಜಾಗದಲ್ಲೂ ಮಲಗಲು ಅವಕಾಶವೇ ಇಲ್ಲ. ಆದರೂ ಒಂದು ಮೂಲೆಯಲ್ಲಿ ಹಳೆಯ ಪ್ಲಾಸ್ಟಿಕ್ ತಾಟನ್ನು ಮೇಲೆ ಕಟ್ಟಿ, ಮಕ್ಕಳನ್ನು ಮಲಗಿಸಿದ್ದಾಳೆ ಸಾಕಮ್ಮ. 'ಅಯ್ಯೋ ಮಳೆರಾಯ ಹೇಗಾದರೂ ಬೆಳಕು ಹರಿಯುವವರೆಗೂ ಮನೆಯನ್ನು ಸೋರದ ಹಾಗೆ ಕಾಪಾಡು, ಅರ್ಧ ರಾತ್ರಿಯಲ್ಲಿ ಮನೆಯ ಮಾಳಿಗೆಗೆ ಬೊಂಗು ಬಿದ್ದರೆ ಮುಚ್ಚಿ ಬರಲು ನನ್ನಿಂದಾಗದು, ನನಗಲ್ಲದಿದ್ದರೂ ಮಕ್ಕಳಿಗಾಗಿ ಮಳೆ ಕಡಿಮೆ ಮಾಡು. ನಡುರಾತ್ರಿಯಲ್ಲಿ ಈ ಮಳೆಯಲ್ಲಿ ಮನೆ ಸೋರಿದರೆ ನಾವು ಹೋಗಿ ಆಶ್ರಯ ಪಡೆಯುವುದು ಎಲ್ಲಿ?'. . ನೂರಾರು ಚಿಂತೆ ಅವಳ ಎದೆಯಲ್ಲಿ. ಅಮ್ಮನ ತೊಡೆಯ ಮೇಲೆ ಮಲಗಿದ್ದ ಮಗಳು ಗಗನ, 'ಅಮ್ಮ ಅಪ್ಪ ಇದ್ದಿದ್ದರೆ ನಾವೆಲ್ಲ ಆರಾಮಾಗಿ ಮಲಗಿಕೊಳ್ಳುತ್ತಿದ್ದೆವು, ಮನೆ ಎಷ್ಟೇ ಸೋರಿದರೂ ಆತನೇ ನೋಡಿಕೊಳ್ಳುತ್ತಿದ್ದರು... ಅಲ್ವೇ ನಮ್ಮ? ಆ ದೇವರಿಗೆ ಒಂಚೂರು ಕರುಣೆ ಇಲ್ಲ, ಎಂತೆಂತಹ ಕೆಟ್ಟವರನ್ನು ಬದುಕಿಸುತ್ತಾನೆ, ಅಪ್ಪನಂತ ಒಳ್ಳೆಯವರನ್ನು ಕಿತ್ತುಕೊಂಡಿದ್ದಾನೆ' ಅನ್ನುವ ಮಾತು ಕೇಳಿದ ತಾಯಿ ಸಾಕಮ್ಮನಿಗೆ ಏನು ಹೇಳಬೇಕೋ ಗೊತ್ತಾಗದೆ, ಕಣ್ಣಂಚಲ್ಲಿ ನೀರಿನ ಧಾರೆ ಹರಿಯಿತು. 'ಅಮ್ಮ ಈ ಕಾಲದಲ್ಲಿ ಒಳ್ಳೆಯವರಿಗೆ ಜಾಗ ಇಲ್ಲ ಅಂತ ಆ ದೇವರೇ ನನ್ನ ಅಪ್ಪನನ್ನ ಕಿತ್ತುಕೊಂಡು ಸಾಬೀತು ಮಾಡಿದ' ಅಂತ ಅಂದಾಗ, ಅವರಮ್ಮ, 'ಹಾಗೆಲ್ಲ ಅನ್ನಬಾರದು ಕಂದ, ಒಳ್ಳೆಯವರು ನಾಲ್ಕು ದಿನ ಬಾಳಿದರೂ, ಅವರ ಹೆಸರು ಅಜರಾಮರವಾಗಿರುತ್ತೆ, ಅವರು ಈ ಸಮಾಜಕ್ಕೆ ದಾರಿದೀಪವಾಗಿರುತ್ತಾರೆ, ಅವರ ಬದುಕು ಬೇರೆಯವರಿಗೆ ಆದರ್ಶವಾಗುತ್ತದೆ' ಅಂತೆಲ್ಲ ತಿಳಿ ಹೇಳಿದಳು. ತೊಡೆಯ ಮೇಲೆ ಮಲಗಿದ್ದ ಮತ್ತೊಬ್ಬ ಕಿರಿಮಗಳು ಸ್ಪಂದನ ಈ ಮಾತುಗಳನ್ನೆಲ್ಲ ಕೇಳಿಸಿಕೊಳ್ಳುತ್ತಿದ್ದಳು. ಅಪ್ಪ ಅಂದರೆ ಏನು ಅಂತ ತಿಳಿದುಕೊಳ್ಳುವ ಮೊದಲೇ ಅಪ್ಪನನ್ನು ಕಳೆದುಕೊಂಡಿದ್ದ ನತದೃಷ್ಟೆ ಆಕೆ. ಧೋ ಧೋ ಸುರಿಯುವ ಮಳೆಯ ಚಿಂತೆ ಒಂದೆಡೆಯಾದರೆ ಈ ಇಬ್ಬರು ಮಕ್ಕಳು ಕೇಳುವ ಪ್ರಶ್ನೆಗಳ ಸುರಿಮಳೆ ಮತ್ತೊಂದೆಡೆ... ಈಗ ಕಿರಿಯವಳ ಸರದಿ...' ಅಮ್ಮ,,, ಅಪ್ಪ ಸತ್ತು ಈಗ ಏನಾಗಿರಬಹುದು? . ಈ ಪ್ರಶ್ನೆಗೆ ಏನು ಹೇಳಬೇಕೆಂಬು ತೋಚದೇ, ಒಂದು ಕ್ಷಣ ಯೋಚಿಸಿ, "ಮರಣಿಸಿದ ಉತ್ತಮರೆಲ್ಲ "ಚುಕ್ಕಿಗಳಾಗುತ್ತಾರಮ್ಮ" ಅಂತ ಸಮಾಧಾನಿಸಿದಳು ಸಾಕಮ್ಮ. ಅದೇಗೆ ಎಂಬುದೇ ಸ್ಪಂದನಾಳ ತಲೆಯಲ್ಲಿ ಕೊರೆಯಲು ಆರಂಭಿಸಿತು. ಮುಂದಿನ ಪ್ರಶ್ನೆ ಕೇಳಲು ಅನುವಾಗುತ್ತಿದ್ದಂತೆ, ಅವರಮ್ಮ, ಪ್ರಶ್ನೆ ಸಾಕು ಸುಮ್ಮನೆ ಮಲಗಿಕೊಳ್ಳಿ ಬೆಳಗ್ಗೆ ಶಾಲೆಗೆ ಬೇಗನೆ ಹೋಗಬೇಕು, ಸ್ವಾತಂತ್ರ್ಯ ದಿನಾಚರಣೆ ಇದೆ ಎಂದು ಹೇಳಿ ಗದರಿದಳು. ಆದರೆ ಸ್ಪಂದನಾಳ ತಲೆಯಲ್ಲಿ ಮಾತ್ರ ಇಡೀ ರಾತ್ರಿ, 'ನನ್ನಪ್ಪ ಯಾವ ನಕ್ಷತ್ರವಾಗಿರಬಹುದು, ಯಾವ ದಿಕ್ಕಿನಲ್ಲಿ ಹೊಳೆಯುತ್ತಿರಬಹುದು' ಎಂದು ಕೊರೆಯುತ್ತಲೇ ಇತ್ತು. ಹಾಗೂ- ಹೀಗೂ ಬೆಳಕು ಹರಿಯಿತು.. ಇತ್ತ ಬೆಳಿಗ್ಗೆ ಬೇಗನೆ ಎದ್ದು ಸ್ನಾನ ಮಾಡಿ ಇಬ್ಬರೂ ಶಾಲೆಯತ್ತ ಹೆಜ್ಜೆ ಹಾಕಿದರು. ಮಧ್ಯಾಹ್ನ ಮನೆಗೆ ಬರುತ್ತಲೆ ಸ್ಪಂದನಾಳು, 'ಅಮ್ಮ ನಕ್ಷತ್ರಗಳೆಲ್ಲ ಯಾವಾಗ ಚೆನ್ನಾಗಿ ಕಾಣ್ತವಮ್ಮ' ಎಂದು ಕೇಳಿದಳು. ಯಾಕೆ? ಎಂದಳು ಅಮ್ಮ. ಸುಮ್ಮನೆ ಹೇಳಮ್ಮ ಅಂದಳು ಸ್ಪಂದನ. ಮಳೆ ಮೋಡವಿಲ್ಲದ ಸಮಯದಲ್ಲಿ ಅಂದಳು ಅಮ್ಮ. ಮೂರು ದಿನದ ನಂತರ ಮಳೆ ನಿಂತಿತು. ಭಾನುವಾರದ ಆ ರಾತ್ರಿ ಸ್ಪಂದನ ಒಬ್ಬಳೇ ಮೋಡವನ್ನು ಮೋಡದಲ್ಲಿರುವ ನಕ್ಷತ್ರಗಳನ್ನು ಒಂದೇ ಚಿತ್ತದಿಂದ ನೋಡ ಹತ್ತಿದಳು. ಒಂದರ್ಧ ಗಂಟೆಯ ನಂತರ ಜೋರಾಗಿ ಒಳಗೆ ಓಡಿಬಂದು, ಅಮ್ಮನ ಕೈ ಹಿಡಿದು ಹೊರಗೆ ಕರೆತಂದಳು. 'ಅಮ್ಮ ಒಳ್ಳೆಯವರು ಸತ್ತ ನಂತರ ನಕ್ಷತ್ರ ಆಗುತ್ತಾರೆ ಅಂತ ಅಂದಿದ್ಯಲ್ಲ,'ಈಗ ಹೇಳು ಮೋಡದಲ್ಲಿ ಕಾಣುತ್ತಿರುವ ಇಷ್ಟು ನಕ್ಷತ್ರಗಳಲ್ಲಿ ನಮ್ಮಪ್ಪ ಯಾರು? ನಾನೆಷ್ಟೇ ನೋಡಿದರೂ ನನ್ನ ಕಡೆ ಯಾಕೆ ನಮ್ಮಪ್ಪ ಅನ್ನೋ ನಕ್ಷತ್ರ ನೋಡ್ತಾ ಇಲ್ಲ? ಮಾತನಾಡುತ್ತಾ ಇಲ್ಲ? ಎಂದಾಗ ಸಾಕಮ್ಮನಿಗೆ ದುಃಖ ತಡೆಯಲಾಗಲಿಲ್ಲ..

## ನಿಮ್ಮ ಬೆಂಬಲವೇ ನಮ್ಮ ಬಲ

ಪತ್ರಿಕೆಗಳು ತಮ್ಮ ಕಾರ್ಯ ನೈಪುಣ್ಯತೆಯನ್ನು ಅಭಿವೃದ್ಧಿಪಡಿಸಬೇಕಾದರೆ, ಓದುಗರೂ ಸಹ ಚಂದಾದಾರಿಕೆ, ಸ್ವಯಂಪ್ರೇರಿತವಾಗಿ ಜಾಹೀರಾತು ನೀಡಿ ಬೆಂಬಲಿಸಿ ಇತರರಿಗೂ ಪರಿಚಯಿಸಿ. ಮಕ್ಕಳ ಶೈಕ್ಷಣಿಕ ಪ್ರಗತಿಗೆ ಕೈಜೋಡಿಸಬೇಕಿದೆ. ನಿಮ್ಮ ಸಹಕಾರ ಮತ್ತಷ್ಟು ಉತ್ತಮ ಕಾರ್ಯಗಳಿಗೆ ಸ್ಪೂರ್ತಿ. ಸಸಿಗೆ ನೀರೆರೆಯದಿದ್ದರೆ ಹೂವು ನಿರೀಕ್ಷಿಸಲಾಗದು. ಪತ್ರಿಕೆಗೆ ಬೆಂಬಲವಿಲ್ಲದೆ ಸೇವೆಯ ನಿರಂತರತೆ ಕನಸು ಕಾಣಲಾಗದು! ನಿಮ್ಮ ಬೆಂಬಲವೇ ನಮ್ಮ ಕಾಯಕಕ್ಕೆ ಬಲ.

ಹಂಪಿ ಟೈಮ್ಸ್, ಹೊಸಪೇಟೆ : ಮೊ: 9448633038

## ನೀವೂ ಬರೆಯಬಹುದು

ಹಂಪಿ ಟೈಮ್ಸ್ ಪತ್ರಿಕೆ ಆರಂಭಿಸಿದ್ದು ನಾವಾದರೂ, ಕೈಹಿಡಿದು ನಡೆಸುವವರು ನೀವು. ನಮ್ಮ ಇಚ್ಚೆಯೂ ಒಳಗೊಂಡಂತೆ ನಿಮ್ಮ ಆಶಯಗಳಿಗೆ ತಕ್ಕಂತೆ ಪತ್ರಿಕೆಯನ್ನು ರೂಪಿಸುವ ಹೊಣೆಗಾರಿಕೆ, ಜವಾಬ್ದಾರಿಯೂ ನಮ್ಮದಾಗಿದೆ. ಇಲ್ಲಿ ಕೇವಲ ನಮ್ಮ ಬರವಣಿಗೆ ಅಷ್ಟೇ ಅಲ್ಲದೇ, ಬರಹಗಾರರಾಗಿದ್ದರೆ ನೀವೂ ಕೂಡ ನಿಮ್ಮ ಬರಹವನ್ನಿಲ್ಲಿ ಓದಬಹುದು. ಈ ನಿಟ್ಟಿನಲ್ಲಿ ನಿಮ್ಮಿಂದ ಕತೆ, ಕವನ, ವಿವಿಧ ಪ್ರಕಾರದ ಸಾಹಿತ್ಯ ಹಾಗೂ ಮಹಿಳಾ ಮತ್ತು ಮಕ್ಕಳ ಪರ ಚಿಂತನೆ ಒಳಗೊಂಡ ಲೇಖನಗಳನ್ನು ನಾವು ನಿರೀಕ್ಷಿಸುತ್ತಿದ್ದೇವೆ. ಜೊತೆಗೆ ಬಹುಮುಖ್ಯವಾಗಿ ಈ ನೆಲದ ಜನರ ಧ್ವನಿಯಾಗುವ ಹಂಬಲದಿಂದ ಸಾರ್ವಜನಿಕ ಕುಂದು ಕೊರತೆಗಳನ್ನು ಹೇಳಿಕೊಳ್ಳಬಹುದು. ಓದುಗ ಪ್ರಭುಗಳಾದ ನೀವು ಪತ್ರಿಕೆಯ ಭಾಗವೂ ಹೌದು. ಹೀಗಾಗಿ ನಿಮ್ಮ ಪ್ರತಿಕ್ರಿಯೆಯೂ ನಮಗೆ ಅತ್ಯಮೂಲ್ಯ. **ಕಥೆ, ಕವನ, ಸಾಹಿತ್ಯ, ತಂತ್ರಜ್ಞಾನ, ಆರೋಗ್ಯ, ಶಿಕ್ಷಣ, ಕ್ರೀಡೆ, ಕೃಷಿ, ಅಪರೂಪದ ವ್ಯಕ್ತಿಗಳು, ಅಂಕಣ, ಮಹಿಳೆ ಮತ್ತು ಮಕ್ಕಳು ಸೇರಿದಂತೆ ವಿವಿಧ ಕ್ಷೇತ್ರಗಳ** ಕುರಿತಾದ ನಿಮ್ಮ ಬರಹಗಳನ್ನೆಲ್ಲ ಸ್ವೀಕರಿಸುತ್ತೇವೆ ಆದರೆ, ಕಳುಹಿಸಿದ ಬರಹಗಳಲ್ಲಿ ಸಮಂಜಸ ಎನಿಸುವುದಷ್ಟೇ ಪ್ರಕಟಿಸುತ್ತೇವೆ. ನಮ್ಮ ನಂಬುಗೆಯ ಸಮಾಜಕ್ಕಾಗಿ ಒಳಿತನ್ನೇ ಬಯಸುತ್ತ, ಬರೆಯುತ್ತ ಎಲ್ಲರೂ ಒಳ ಗೊಳ್ಳೋಣ.

-: ಸಂಪಾದಕರು :-

ಹಂಪಿ ಟೈಮ್ಸ್, ಶ್ರೀ ಓಂಕಾರೇಶ್ವರ ದೇವಸ್ಥಾನದ ಪಕ್ಕದಲ್ಲಿ, ವಾಲ್ಮೀಕಿ ವೃತ್ತದ ಹತ್ತಿರ, ಹೊಸಪೇಟೆ, ವಿಜಯನಗರ ಜಿಲ್ಲೆ.
ಇ-ಮೇಲ್:hampitimes@gmail.com
M: 94486 33038

## ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತುಲೋಪ, ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರ ರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

– ಜಾಹೀರಾತು ವ್ಯವಸ್ಥಾಪಕರು.

**ಶಿಕ್ಷಣವೇ ದೇಶದ ಭವಿಷ್ಯಕ್ಕೆ ಬಲ. ಜ್ಞಾನದ ಬೆಳಕು ಪ್ರತಿಯೊಬ್ಬ ಪೌರನ ಜೀವನ ಮೌಲ್ಯವನ್ನೂ, ಸಾಮಾಜಿಕ ಪ್ರಗತಿಯನ್ನು ರೂಪಿಸುವ ಮಹತ್ವದ ಅಂಶ. ಈ ಗುರಿಯ ಸಾಧನೆಗೆ ಆಡಳಿತಾಂಗದ ಜತೆಗೆ ಶಾಸಕರ ಸಹಭಾಗೀತ್ವವೂ ಅತಿ ಅಗತ್ಯ. ಪ್ರಗತಿಯತ್ತ ಸಾಗುತ್ತಿರುವ ದೇಶಗಳಲ್ಲಿ ಭಾರತವು ಪೈಪೋಟಿ ಮಾಡಬೇಕಾದರೆ, ಶಿಕ್ಷಣ ಪದ್ಧತಿಯಲ್ಲಿ ಬದಲಾವಣೆಗಳನ್ನು ತರಲೇಬೇಕಾಗುತ್ತದೆ. ಭಾರತೀಯ ಶಿಕ್ಷಣದಲ್ಲಿ ಮಕ್ಕಳಿಗೆ ಸ್ವಾವಲಂಬಿ ಹಾಗೂ ಆರ್ಥಿಕವಾಗಿ ಸದೃಢರಾಗಿ ಸ್ವಾತಂತ್ರ್ಯ ಜೀವನ ಕಟ್ಟಿಕೊಳ್ಳಲು ಸಹಕಾರಿಯಾಗಬೇಕಿದೆ. ಒಂದಿಷ್ಟು ಬದಲಾವಣೆ ತಂದರೆ ಖಂಡಿತ ನಮ್ಮಲ್ಲಿ ಕೂಡ ಪ್ರತಿಶತ 100 ರಷ್ಟು ಶಿಕ್ಷಣ ಸಾಧಿಸಲು ಸಾಧ್ಯವಾಗುತ್ತದೆ.**

# ಶೈಕ್ಷಣಿಕ ಪ್ರಗತಿಯಲ್ಲಿ ಶಾಸಕರ ಪಾತ್ರ

ವ್ಯಕ್ತಿತ್ವದ ವಿಕಾಸ ಹಾಗೂ ಸುಂದರ ಹಾಗೂ ಅರ್ಥಪೂರ್ಣ ಬದುಕು ರೂಪಿಸಿಕೊಳ್ಳುವುದಕ್ಕೆ ಶಿಕ್ಷಣ ಬೇಕು.

ಶಿಕ್ಷಣವು ಜೀವನ ರೂಪಿಸಿಕೊಳ್ಳಲು ಬೇಕಾದ ಸಾಮಾಜಿಕ, ಆರ್ಥಿಕ ,ವೈಜ್ಞಾನಿಕ, ರಾಜಕೀಯ ಅದರಲ್ಲೂ ವಿಶೇಷವಾಗಿ ಔದ್ಯೋಗಿಕ ತಳಹದಿಯ ಮೇಲೆ ಜೀವನ ರೂಪಿಸಿಕೊಳ್ಳಲು ಸಹಕಾರಿಯಾಗುವಲ್ಲಿ ಅರ್ಥ ಪೂರ್ಣ ಭೋಧನ ಉದ್ದೇಶಗಳನ್ನು ಒಳಗೊಂಡಿರಬೇಕು.

ಭಾರತದ ಜನಗಣತಿಯು 2011 ರಲ್ಲಿ ಸರಾಸರಿ ಸಾಕ್ಷರತಾ ದರವನ್ನು 73% ಎಂದು ಅಂದಾಜಿಸಿದೆ, ಆದರೆ ರಾಷ್ಟ್ರೀಯ ಅಂಕಿಅಂಶ ಆಯೋಗವು 2017–18 ರಲ್ಲಿ ಸಾಕ್ಷರತಾ ಪ್ರಮಾಣವು 80.6% ಎಂದು ಸಮೀಕ್ಷೆ ಮಾಡಿದೆ. ನಗರ ಪ್ರದೇಶಗಳಲ್ಲಿ ಸಾಕ್ಷರತಾ ಪ್ರಮಾಣವು 90% ರಷ್ಟಿದ್ದು, ಗ್ರಾಮೀಣ ಪ್ರದೇಶಗಳಿಗಿಂತ 77% ಹೆಚ್ಚಾಗಿದೆ. ಭಾರತದಲ್ಲಿ ಸಾಕ್ಷರತಾ ದರದಲ್ಲಿ ವ್ಯಾಪಕವಾದ ಲಿಂಗ ಅಸಮಾನತೆ ಇದೆ ಮತ್ತು ಪರಿಣಾಮಕಾರಿ ಸಾಕ್ಷರತಾ ದರಗಳು 7 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ವಯಸ್ಸಿನವರು ಪುರುಷರಿಗೆ 88% ಮತ್ತು ಮಹಿಳೆಯರಿಗೆ 81% ರಷ್ಟಿದೆ. ಸಾಕ್ಷರತೆ ಪ್ರಮಾಣದಲ್ಲಿ ಗಣನಿಯ ಬದಲಾವಣೆಯಾಗುತ್ತಿದ್ದರೂ ಕೂಡ ಸಂಪೂರ್ಣ ಸಾಕ್ಷರತೆ ಪಡೆಯಲಿಕ್ಕೆ ಸಾಧ್ಯವಾಗುತ್ತಿಲ್ಲ ಎಂಬುದಕ್ಕೆ ಅನೇಕ ಕಾರಣಗಳು ಇದಾವೆ.

ಇತ್ತಿಚಿನ ದಿನಗಳಲ್ಲಿ ಅದರಲ್ಲಿಯೂ ಕರ್ನಾಟಕದಲ್ಲಿ ನಾವು ಬೇರೆ ದೇಶದ ಶಿಕ್ಷಣ ಪದ್ಧತಿಗೆ ಹೋಲಿಸಿದಾಗ, ಅನೇಕ ವ್ಯತ್ಯಾಸಗಳನ್ನು ಕಾಣುತ್ತೇವೆ. ಬುನಾದಿ ಹಂತ್ತದಲ್ಲಿ ಅದರಲ್ಲೂ ಪೂರ್ವ ಪ್ರಾಥಮಿಕ ಶಿಕ್ಷಣದಲ್ಲಿ ಹೆಚ್ಚಿನ ಒತ್ತು ಕೊಡುವ ಅಗತ್ಯತೆ ಇದೆ, ಅದರಲ್ಲೂ ಗ್ರಾಮಿಣ ಪ್ರದೇಶದಲ್ಲಿ ಪ್ರಾಥಮಿಕ ಶಿಕ್ಷಣದ ಸ್ಥಿತಿ ತುಂಬಾ ಚಿಂತಾಜನಕವಾಗಿದೆ.

ಗ್ರಾಮೀಣ ಪ್ರದೇಶಗಳಲ್ಲಿ ಮಗು ಪೂರ್ವ ಪ್ರಾಥಮಿಕ ಶಿಕ್ಷಣ ಪಡೆಯದೆ, ಅಥವಾ ನೇರವಾಗಿ 1 ನೆಯ ತರಗತಿದೆ ಬಂದಾಗ ಎಲ್ಲಾ ಸಾಮರ್ಥ್ಯಗಳನ್ನು ಸಾಧಿಸಿಲಿಕ್ಕೆ ಸಾಧ್ಯವಾಗದೆ ಇರಬಹುದು. ಇಲ್ಲಿ ಶಿಕ್ಷಕರಿಗೂ ಸಮಸ್ಯೆ ಆಗುತ್ತೆ.

ಹಂತ ಹಂತವಾಗಿ, ಆಯಾ ಹಂತದಲ್ಲಿ ಶಿಕ್ಷಣಕ್ಕೆ ಒತ್ತು ಕೊಟ್ಟು ಶಿಕ್ಷಣ ಪದ್ಧತಿಯನ್ನು ಬಲಪಡಿಸಿದಾಗ ಮಾತ್ರ ನಾವು ಇಟ್ಟುಕೊಳ್ಳು ವಂತಹ ಸಾಮರ್ಥ್ಯ, ಗುರಿ, ಉದ್ದೇಶಗಳನ್ನು ತಲುಪಲು ಸಾಧ್ಯ ವಾಗುತ್ತದೆ. ಗ್ರೇಡ್ ಶಿಕ್ಷಣಕ್ಕೆ ಹೆಚ್ಚು ಒತ್ತು ಕೊಡದೆ, ಪ್ರಾಯೋಗಿಕ ಶಿಕ್ಷಣದ ಅಗತ್ಯ ಇದೆ.

**ರಾಷ್ಟ್ರೀಯ ಶಿಕ್ಷಣ ನೀತಿ 2020 ರ ವೈಶಿಷ್ಟ್ಯಗಳು**

ಕಸ್ತೂರಿರಂಗನ್ ಸಮಿತಿಯು ಸಲ್ಲಿಸಿದ ರಾಷ್ಟ್ರೀಯ ಶಿಕ್ಷಣ ನೀತಿಯು ಅಸ್ತಿತ್ವದಲ್ಲಿರುವ ಶಿಕ್ಷಣ ವ್ಯವಸ್ಥೆ ಎದುರಿಸುತ್ತಿರುವ ಈ ಕೆಳಗಿನ ಸವಾಲುಗಳನ್ನು ಪರಿಹರಿಸಲು ಪ್ರಯತ್ನಿಸುವ ಶಿಕ್ಷಣ ನೀತಿಯನ್ನು ಸಲ್ಲಿಸಿದೆ..

**ಗುಣಮಟ್ಟ, ಕೈಗೆಟುಕುವಿಕೆ, ಇಕ್ವಿಟಿ, ಪ್ರವೇಶ, ಹೊಣೆಗಾರಿಕೆ**

ಈ ನೀತಿಯು ಶಾಲೆಯಿಂದ ಉನ್ನತ ಶಿಕ್ಷಣದವರೆಗೆ ಶಿಕ್ಷಣದ ಎಲ್ಲಾ ಹಂತಗಳಲ್ಲಿ ಸುಧಾರಣೆ ಗಳನ್ನು ಒದಗಿ ಸುತ್ತದೆ. ಶಿಕ್ಷಕರ ತರಬೇತಿ ಯನ್ನು ಬಲಪಡಿಸು ವುದು, ಅಸ್ತಿತ್ವದಲ್ಲಿರುವ ಪರೀಕ್ಷಾ ವ್ಯವಸ್ಥೆಯನ್ನು ಸುಧಾರಿಸು ವುದು, ಬಾಲ್ಯದ ಆರೈಕೆ ಮತ್ತು ಶಿಕ್ಷಣದ ನಿಯಂತ್ರಕ ಚೌಕಟ್ಟನ್ನು ಪುನರ್ರಚಿಸುವತ್ತ ಗಮನ ಹರಿಸುವುದು NEP ಗುರಿಯಾಗಿದೆ. ಹಾಗೆಯೆ

**NEP ಯ ಇತರ ಉದ್ದೇಶಗಳು:**

ಶಿಕ್ಷಣದಲ್ಲಿ ಸಾರ್ವಜನಿಕ ಹೂಡಿಕೆಯನ್ನು ಹೆಚ್ಚಿಸುವುದು,
ರಾಷ್ಟ್ರೀಯ ಶಿಕ್ಷಣ ಆಯೋಗ (ಎನ್ಇಸಿ) ಸ್ಥಾಪನೆ,
ವೃತ್ತಿಪರ ಮತ್ತು ವಯಸ್ಕರ ಶಿಕ್ಷಣದ ಮೇಲೆ ಹೆಚ್ಚಿನ ಗಮನ,
ತಂತ್ರಜ್ಞಾನದ ಬಳಕೆ ಅಗತ್ಯ.



ನಂದಿನಿ ಸನಬಾಲ್
ಶಿಕ್ಷಕಿ, ಗುಲ್ಬರ್ಗಾ

Scan For Digital Colourful
HAMPI TIMES E-paper

**ರಾಷ್ಟ್ರೀಯ ಶಿಕ್ಷಣ ನೀತಿ 2020 ರ ಪ್ರಮುಖ ಶಿಫಾರಸುಗಳು**

ರಾಷ್ಟ್ರೀಯ ಶಿಕ್ಷಣ ನೀತಿ 2020 ಈ ಕೆಳಗಿನ ಅಂಶಗಳಿಗೆ ಸಂಬಂಧಿಸಿದಂತೆ ಶಿಫಾರಸು ಗಳು ಮತ್ತು ಸುಧಾರಣೆಗಳನ್ನು ಹೊಂದಿದೆ:

**ಬಾಲ್ಯದ ಆರೈಕೆ ಮತ್ತು ಶಿಕ್ಷಣ**
**ಶಿಕ್ಷಣ ಹಕ್ಕು ಕಾಯ್ದೆ, 2009 (ಆರ್‌ಟಿಇ ಕಾಯ್ದೆ)**
**ಪಠ್ಯಕ್ರಮದ ಚೌಕಟ್ಟು**
**ಶಾಲಾ ಪರೀಕ್ಷೆಗಳು**
**ಉನ್ನತ ಶಿಕ್ಷಣ ಸಂಸ್ಥೆಗಳು (ಮಾನ್ಯತೆಗಳು ಮತ್ತು ರಚನೆ) (ಸಂವಹನ ಮತ್ತು ಐಟಿ ಮೂಲಕ)**
**ರಾಷ್ಟ್ರೀಯ ಶಿಕ್ಷಣ ಧ್ಯೇಯ**
**ರಾಷ್ಟ್ರೀಯ ಸಂಶೋಧನಾ ಪ್ರತಿಷ್ಠಾನ ಶಿಕ್ಷಣ ಆಡಳಿತ**
**ಶಿಕ್ಷಣಕ್ಕೆ ಹಣಕಾಸು ಒದಗಿಸುವುದು**
**ವೃತ್ತಿಪರ ಕೋರ್ಸ್‌ಗಳು**
**ತ್ರಿಭಾಷಾ ಸೂತ್ರ.**

ಹೀಗೆ ಅನೇಕ ಬದಲಾವಣೆಯನ್ನು ಹೊಂದಿದರು ಕೂಡ, ಅಂದುಕೊಂಡ ಸಾಧನೆ ಸಾಧಿಸಲು ಆಗದೆ ಇರಲು ನಾವು ಕೊಂಡು ಕೊಂಡಂತಹ ಅನೇಕ ಕಾರಣಗಳು ಇಲ್ಲಿವೆ. ಇತ್ತೀಚಿನ ದಿನಗಳಲ್ಲಿ ಕೇಂದ್ರ ಸರಕಾರ ಹಾಗೂ ರಾಜ್ಯ ಸರ್ಕಾರಗಳು ಶಿಕ್ಷಣಕ್ಕೆ ಕೋಟಿಗಟ್ಟಲೆ ಹಣವನ್ನು ಬಿಡುಗಡೆ ಮಾಡುತ್ತಿದ್ದು, ಹೊಸ ಹೊಸ ಕಲಿಕಾ ವಿಧಾನಗಳು ಜಾರಿಯಲ್ಲಿದ್ದರೂ ಕೂಡ ಅವು ಕೇವಲ ಗ್ರೇಡ್ ಗೆ ಸೀಮಿತವಾಗಿದ್ದು ಯಾವುದೇ ಚಟುವಟಿಗಳಿಗೆ ಆಸ್ಪದ ಇಲ್ಲ.



ಸೈದ್ಧಾಂತಿಕ ಆಲೋಚನೆಗಳೂ ಪ್ರಾಯೋಗಿಕತೆಯೊಂದಿಗೆ ಕೂಡಿದ್ದರೆ ಮಾತ್ರ ಸಾಮರ್ಥ್ಯ ಗುರಿ ತಲುಪಲು ಸಾಧ್ಯ.

ಇತ್ತಿಚಿನ ದಿನಗಳಲ್ಲಿ ಎಲ್ಲೊ ಒಂದು ಕಡೆ ಶಿಕ್ಷಕರ ಮೇಲೆ ಒತ್ತಡಗಳು ಹೆಚ್ಚುತ್ತಿದ್ದು, ಕಲಿಕಾ ಮಟ್ಟದಲ್ಲಿ ಪ್ರಗತಿ ಸಾಧಿಸಲಿಕ್ಕೆ ಅನೇಕ ಯೋಜನೆಗಳು ಬರುತ್ತಿದ್ದು, ಅವುಗಳು ಕೇವಲ ಸಿದ್ಧಾಂತ ರೂಪದಲ್ಲಿವೆ, ಅದರಲ್ಲೂ ಬಿಸಿ ಊಟ, ಚಿಕ್ಕಿ, ಮೊಟ್ಟೆ, ಬಾಳೆ ಹಣ್ಣು, ಆನ್ಲೈನ್ ಹಾಜರಾತಿ, ಅದರಲ್ಲೂ ಆಧಾರ ಸೀಡಿಂಗ್, ಶೂ, ಬಟ್ಟೆ ಪುಸ್ತಕ, ಮಕ್ಕಳ ವಿದ್ಯಾರ್ಥಿವೇತನ, ಬ್ಯಾಂಕ್ ಖಾತೆ ಅಬ್ಬಾ ಎಲ್ಲವುಗಳನ್ನು ಆನ್ಲೈನ್ ನಲ್ಲಿ ನಿಭಾಯಿಸುವುದು.....

ಅಲ್ಲಾ ರಿ ಮೇಲಿಂದ ಮೇಲೆ ಮೇಲಿಂದ ಮೇಲೆ ಹೊಸ ಹೊಸ ಯೋಜನೆಗಳು, ಅವು ಪರೀಕ್ಷೆ ಅಂಕ ಗ್ರೇಡ್‌ಗೆ ಮಾತ್ರ ಸೀಮಿತವಾಗಿದ್ದು, ಶಿಕ್ಷಕರು ಸುಸ್ತಾಗಿ ಬಿಟ್ಟಿದ್ದಾರೆ, ಬೇಸತ್ತಿದ್ದಾರೆ.

ನೇರವಾಗಿ ಮಕ್ಕಳೊಂದಿಗೆ ತರಗತಿಯ ಕೋಣೆಯಲ್ಲಿ ಪಾಠ ಬೋಧನೆಗೆ ಅವಕಾಶ ಮಾಡಿಕೊಡಿ, ಮಕ್ಕಳೊಂದಿಗೆ ಬೆರೆತು ಅವರಿಗೆ ಪ್ರಾಯೋಗಿಕ ಶಿಕ್ಷಣ ನೀಡಲು ಶಿಕ್ಷಕರು ಸಮರ್ಥರಾಗಿದ್ದಾರೆ, ಹೆಚ್ಚುತ್ತಿರುವ ಕಾರ್ಯಕ್ರಮಗಳು ಹಾಗೂ ಒತ್ತಡಗಳಿಂದ ಶಿಕ್ಷಕರಿಗೆ ಸಮಯವೇ ಇಲ್ಲದಂತಾಗಿದೆ.

ಶಿಕ್ಷಕರಿಗೂ ಕೂಡ ಮಕ್ಕಳ ಭವಿಷ್ಯದ ಬಗ್ಗೆ ತುಂಬಾ ಚಿಂತೆ ಇದೆ. ಅದರಲ್ಲೂ ಗ್ರಾಮೀಣ ಪ್ರದೇಶದಲ್ಲಿ ಪಾಲಕರು ತಮ್ಮ ಮಕ್ಕಳ ಕಲಿಕೆಯ ಬಗ್ಗೆ ಶಿಕ್ಷಕರ ಮೇಲೆ ಸಂಪೂರ್ಣ ನಂಬಿಕೆ ಇಟ್ಟಿರುತ್ತಾರೆ. ಮೇಲಿಂದಮೇಲೆ ಪರೀಕ್ಷೆಗಳು, ಸರಕಾರದ ಇತರೆ ಕಾರ್ಯಕ್ರಮಗಳಿಂದ ಶಿಕ್ಷಕರಿಗೆ ತರಗತಿಯ ಕೋಣೆಯಲ್ಲಿ ಪಾಠ ಬೋಧನೆಗೆ ಸಮಯಾವಕಾಶದ ಕೊರತೆಯಾಗಿ ಕನಿಷ್ಠ ಕಲಿಕಾ ಸಾಧಾನೆ ಕೂಡ ಸಾಧಿಸಲಿಕ್ಕೆ ಆಗುತ್ತಿಲ್ಲ.

ಶಿಕ್ಷಕರಿಗೆ ಪಾಠ ಬೋಧನೆಗೆ ಅವಕಾಶ ಕೊಡಿ, ಕಲಿಕಾ ಸಾಧನೆಗಾಗಿ ಕೈಗೊಳ್ಳುತ್ತಿರುವ ಹೊಸ ಹೊಸ ಯೋಜನೆಗಳು ಪ್ರಾಯೋಗಿಕತೆಯಿಂದ ಕೂಡಿರಲಿ. ಶಿಕ್ಷಣದ ಜೊತೆ ಜೊತೆಗೆ ಪ್ರಾಥಮಿಕ ಹಂತದಲ್ಲಿಯೇ ನೈತಿಕ, ರಾಜಕೀಯ, ಸಾಮಾಜಿಕ ಹಾಗೂ ವೃತ್ತಿಪರ ಶಿಕ್ಷಣಕ್ಕೆ ಹೆಚ್ಚು ಹೊತ್ತು ಕೊಡಬೇಕು. ಶಿಕ್ಷಣ ಕೇವಲ ಗ್ರೇಡ್ ಅಥವಾ ವೃತ್ತಿಗಾಗಿ ಪಡೆಯುವಂತಹದಲ್ಲ ಎಂಬುದನ್ನು ಮಕ್ಕಳಿಗೆ ಮನವರಿಕೆ ಮಾಡಿಕೊಡಬೇಕು.

ಮಕ್ಕಳಿಗೆ ಸುಂದರ ಬದುಕು ಹಾಗೂ ಸ್ವಾತಂತ್ರ್ಯದ ಬದುಕು ರೂಪಿಸಿಕೊಳ್ಳುವುದಕ್ಕೆ ನಮ್ಮ ಶಿಕ್ಷಣ ಸಹಕಾರಿ ಆಗಬೇಕು, ಆರ್ಥಿಕವಾಗಿ ಸದೃಢರಾಗಲು ನಮ್ಮ ಶಿಕ್ಷಣ ಅವಕಾಶ ಮಾಡಿಕೊಡಬೇಕು. ನಾವೂ ಬೇರೆ ಬೇರೆ ದೇಶಗಳ ಶಿಕ್ಷಣ ಪದ್ಧತಿಗೆ ಹೋಲಿಕೆ ಮಾಡಿದಾಗ ವ್ಯತ್ಯಾಸಗಳು ಕಾಣುತ್ತಿವೆ.

ನಮ್ಮ ಭಾರತದಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳು ಹೆಚ್ಚಾಗಿದ್ದು, ಸರ್ಕಾರಿ ಶಿಕ್ಷಣ ಸಂಸ್ಥೆಗಳಿಗೆ ಹೆಚ್ಚಿನ ಆದ್ಯತೆ ಕೊಡಬೇಕು. ಚೈನಾ ದೇಶದಲ್ಲಿ ಶೇಕಡ 90 ರಷ್ಟು ವಿದ್ಯಾರ್ಥಿಗಳು ಸರಕಾರಿ ಶಾಲೆಯಲ್ಲಿ ಓದುತ್ತಾರೆ. ಇಲ್ಲಿ ಸರಕಾರಿ ಶಾಲೆಗಳು ಹಾಗೂ ಶಿಕ್ಷಣ ಸಂಸ್ಥೆಗಳಿಗೆ ಹೆಚ್ಚಿನ ಒತ್ತು ಕೊಡಲಾಗುತ್ತಿದೆ.

ಚೈನಾದಲ್ಲಿ ಎರಡನೇ ವಯಸ್ಸಿನಲ್ಲಿ ಮಕ್ಕಳಿಗೆ ಶಿಕ್ಷಣ ಆರಂಭಿಸಲಾಗುತ್ತದೆ. ಇಲ್ಲಿನ ಶಿಕ್ಷಣ ಪದ್ಧತಿಯಲ್ಲಿ ನೈತಿಕ, ರಾಜಕೀಯ, ಸರಳಿಕೃತ ಚೈನೀಸ್ ಲಿಪಿ ಹಾಗೂ ವೃತ್ತಿ ಶಿಕ್ಷಣಕ್ಕೆ ಹೆಚ್ಚು ಒತ್ತು ಕೊಡಲಾಗುತ್ತಿದೆ.

ಶಿಕ್ಷಣದೊಂದಿಗೆ ಸ್ವ ಕಲಿಕೆಗೆ ಹಾಗೂ ಶಾಲೆಗಳ ಸ್ವಚ್ಛತೆಯಿಂದ, ಶಾಲೆಗಳ ನಿರ್ವಹಣೆಯಲ್ಲಿ ಮಕ್ಕಳು ಭಾಗಿ ಆಗುತ್ತಾರೆ. ಅಲ್ಲದೆ ಮಕ್ಕಳಿಗೆ ಬಿಡುವಿನ ವೇಳೆಯಲ್ಲಿ 20 ನಿಮಿಷ ನಿದ್ರೆ ಮಾಡಲು ಅವಕಾಶ ಮಾಡಿಕೊಡಿಕೊಡುವುದರಿಂದ ಆಯಾಸ ಆಗುವುದಿಲ್ಲ.

ಹಾಗೆಯೆ ಮಾಧ್ಯಮಿಕ ಶಾಲೆಗಳಲ್ಲಿ ಎಲೆಕ್ಟ್ರಾನಿಕ್ಸ್, ರೋಬೋಟಿಕ್ಸ್, ಪೊಲಿಟಿಕಲ್ ಹಾಗೂ ದೇಶ ಸೇವೆ ಮಾಡುವ ಸೈನಿಕರ ಬಗ್ಗೆ ಕೂಡ ಕೋರ್ಸ್ ಆರಂಭ ಮಾಡುತ್ತಿದ್ದು, ಇನ್ಟೆನ್ಶಿಪ್ ಕೋರ್ಸ್ ಗಳಿಗೂ ಅವಕಾಶಗಳಿದ್ದಾವೆ.

ನಮ್ಮ ಭಾರತೀಯ ಶಿಕ್ಷಣ ಪದ್ಧತಿಯಲ್ಲಿ ಕೂಡ ಈ ರೀತಿಯ ಬದಲಾವಣೆಗಳಿಗೆ ಅವಕಾಶ ಮಾಡಿಕೊಡಬೇಕು. ಪಠ್ಯ ಬೋಧನೆಗಳೊಂದಿಗೆ ವಿವಿಧ ಕ್ಷೇತ್ರದಲ್ಲಿ ಆಸಕ್ತಿ ಇರುವ ಮಕ್ಕಳಿಗೆ, ವಿಶೇಷ ಅವಕಾಶಗಳನ್ನು ಕೊಟ್ಟು ಪ್ರಾಥಮಿಕ ಹಂತದಿಂದಲೇ ಅವರಿಗೆ ಅವಕಾಶ ಕಲ್ಪಿಸಿ ಕೊಡಬೇಕು.

ಹೊಸ ಹೊಸ ಯೋಚನೆಗಳತ್ತ ಮಕ್ಕಳು ಆಕರ್ಷಿಸಲ್ಪಡಬೇಕು, ಕಲೆ, ರಂಗ ಕಲೆ, ಅಂತರಾಷ್ಟ್ರೀಯ ಕ್ರೀಡೆಗಳು, ಬಾಹ್ಯಾಕಾಶ, ವಿವಿಧ ಸಂಶೋಧನೆಗಳು, ನೆಲ ಜಲಗಳ ಬಗ್ಗೆ, ಹೊಸ ಹೊಸ ತಂತ್ರಜ್ಞಾನಗಳತ್ತ ನಮ್ಮ ಗ್ರಾಮೀಣ ಮಕ್ಕಳು ಮುಂದೆ ಹೋಗಲು ಶಿಕ್ಷಣ ಪದ್ಧತಿ ಸಹಕಾರಿ ಆಗಬೇಕು

ಪ್ರಗತಿಯತ್ತ ಸಾಗುತ್ತಿರುವ ದೇಶಗಳಲ್ಲಿ ಭಾರತವು ಪೈಪೋಟಿ ಮಾಡಬೇಕಾದರೆ, ಶಿಕ್ಷಣ ಪದ್ಧತಿಯಲ್ಲಿ ಬದಲಾವಣೆಗಳನ್ನು ತರಲೇಬೇಕಾಗುತ್ತದೆ. ನಮ್ಮಲ್ಲಿಯೂ ತಾಂತ್ರಿಕ ಶಿಕ್ಷಣ ಹಾಗೂ ರೋಬೋಟಿಕ್ ಶಿಕ್ಷಣಕ್ಕೆ ಹೆಚ್ಚು ಒತ್ತು ಕೊಡಬೇಕು, ಅಲ್ಲದೆ ಮಕ್ಕಳಿಗೆ ನೈತಿಕ ಶಿಕ್ಷಣದ ಅಗತ್ಯ ಕೂಡ ಇದೆ.

ಗ್ರಾಮೀಣ ಪ್ರದೇಶದ ಜನರಲ್ಲಿ ಅನೇಕ ಸಮಸ್ಯೆಗಳು ಇದ್ದು ಮಕ್ಕಳ ಕಲಿಕೆಗೆ ಪೂರಕವಾಗಿ ಬೇಕಾಗಿರುವ ಸಮವಸ್ತ್ರ, ಬಿಸಿ ಊಟ, ಉಚಿತ ಪಠ್ಯ ಪುಸ್ತಕ, ವಿದ್ಯಾರ್ಥಿ ವೇತನ ಹೀಗೆ ಅನೇಕ ಸೌಲಭ್ಯಗಳನ್ನು ಸರಕಾರವು ಕೊಡುತ್ತಿದ್ದು ಮುಂದಿನ ದಿನಗಳಲ್ಲಿ ಒಟ್ಟಾರೆಯಾಗಿ ಪ್ರಾಯೋಗಿಕ ನೈತಿಕ ಹಾಗೂ ವೃತ್ತಿಪರ ಶಿಕ್ಷಣಕ್ಕೆ ಹೆಚ್ಚು ಒತ್ತು ಕೊಡಬೇಕು....

ಹೊಸ ಹೊಸ ತಂತ್ರಜ್ಞಾನ ಬಳಸಿ ಹೊಸ ಹೊಸ ಯೋಜನೆಗಳು ಬರಲಿ ಹಾಗೂ ಶಿಕ್ಷಕರ ಮೇಲಿರುವ ಹೊರೆ ಕಡಿಮೆಯಾಗಿ ಶಿಕ್ಷಕರು ಕೂಡ ನೇರವಾಗಿ ತರಗತಿಯಲ್ಲಿ ಮಕ್ಕಳಿಗೆ ಪಾಠ ಬೋಧನೆ ಮಾಡುವಂತಹ ಅವಕಾಶ ಸಿಗಲಿ. ಖಂಡಿತ ನಮ್ಮಲ್ಲಿ ಕೂಡ ಪ್ರತಿಶತ 100 ರಷ್ಟು ಶಿಕ್ಷಣ ಸಾಧಿಸಲು ಸಾಧ್ಯವಾಗುತ್ತದೆ.

ಸರಕಾರಕ್ಕೂ ನನ್ನ ಪುಟ್ಟ ಮನವಿ ಬದಲಾಗುತ್ತಿರುವ ಕಾಲಮಾನಕ್ಕೆ ತಕ್ಕಂತೆ , ತಾಂತ್ರಿಕ ಶಿಕ್ಷಣ ಬಗ್ಗೆ ಶಿಕ್ಷಕರಿಗೆ ಒಳ್ಳೆಯ ತರಬೇತಿಗಳನ್ನು ನೀಡಿ. ಭಾರತೀಯ ಶಿಕ್ಷಣದಲ್ಲಿ ಮಕ್ಕಳಿಗೆ ಸ್ವಾವಲಂಬಿ ಹಾಗೂ ಆರ್ಥಿಕವಾಗಿ ಸದೃಢರಾಗಿ ಸ್ವಾತಂತ್ರ್ಯ ಜೀವನ ಕಟ್ಟಿಕೊಳ್ಳಲು ಸಹಕಾರಿಯಾಗಲೆಂದು ಆಶಿಸುತ್ತೇನೆ.

• Admissions
• Requirements
• Firm Branding
• Public Notice
• Change of Name
BOOK NOW!
Book Your Advertisements in Leading Local HAMPI TIMES Print & Digital News Paper
9482599089 / 9448633038
• Obituary
• Remembrance
• Birthday wish ads
• Events Display &
• Classified ads
SHUBHA Ads C/o HAMPI TIMES, Bamboo Bazaar, Nr Valmiki Circle, Hosapete-583201 Vijayanagara Dist.

Printed by: MANJUNATHA .H .B Published by: A. SHUBHA. Owned by: A. SHUBHA and Printed at : AMRITH PRINTERS, No. 63/A, Opp. Police Station, Ramanagara, Hagaribommanahalli – 583212, Vijayanagara Dist., Karnataka. Published at : At Ward No.15, Near Bannimahankali Temple, 3rd Cross, New Amaravathi, Hospet - 583201, Vijayanagara Dist., Karnataka. Editor : BASAPUR BASAVARAJA, PRGI No:KARKAN/2023/88055

# ಭೂವಾತಾವರಣವೆಲ್ಲ ಶುದ್ಧ ಆಮ್ಲಜನಕವಾದರೆ




ಪ್ರಜ್ವಲ್ ಓಡುತ್ತಲೇ ಇದ್ದಾನೆ. ಕಾಲಡಿಯಲ್ಲಿ ನೀರು, ಸುತ್ತಲೂ ಮರಗಳಿಂದ ಕೂಡಿದ ಗೊಂಡಾರಣ್ಯ. ಆ ಗೊಂಡಾರಣ್ಯಕ್ಕೆ ಧಗಧಗನೇ ಹೊತ್ತಿ ಉರಿಯುತ್ತಿದೆ. ಕಾಲಡಿಯ ನೀರೂ ಸಹ ಬಿಸಿಯಾಗುತ್ತಿದೆ. ದೂರದಲ್ಲಿ ಕೀಟಗಳ ಸದ್ದು ಕೇಳಿಬರುತ್ತಿದೆ. ಕ್ರಮೇಣ ಈ ಸದ್ದು ಸನಿಹವಾಗುತ್ತಿದೆ. ಅವು ಸಾಮಾನ್ಯ ಕೀಟಗಳಲ್ಲ. ದೈತ್ಯಕಾರದ ಕೀಟಗಳು. ಅವು ಪ್ರಜ್ವಲ್‌ನನ್ನು ಹಿಂಬಾಲಿಸಿವೆ. ಒಂದೆಡೆ ಬೆಂಕಿ ಹೆಚ್ಚುತ್ತಲೇ ಇದೆ. ಇಡೀ ಕಾಡನ್ನೇ ಆವರಿಸುತ್ತಿದೆ. ಇನ್ನೊಂದೆಡೆ ದೈತ್ಯ ಕೀಟಗಳು ದಾಳಿ ನಡೆಸಲು ಹಿಂಬಾಲು ಬಿದ್ದಿವೆ. ಮತ್ತೊಂದೆಡೆ ಕಾಲಡಿಯ ನೀರು ಓಡಲು ಸಹಾಯಕವಾಗಿಲ್ಲ. ಕಷ್ಟಪಟ್ಟು ಓಡಲು ಪ್ರಯತ್ನಿಸಿದ ಪ್ರಜ್ವಲ್ ಕಾಲುಜಾರಿ ನೀರಿನಲ್ಲಿ ಬಿದ್ದ. ಬೆಂಕಿ ಮತ್ತು ಕೀಟಗಳು ಆತನ ಮೇಲೆ ದಾಳಿ ನಡೆಸಿಯೇ ಬಿಟ್ಟವು. ಜೀವಭಯದಿಂದ ಕಿಟಾರನೆ ಕಿರುಚಿದ, ತಪ್ಪಿಸಿಕೊಳ್ಳಲು ಹೊರಳಾಡಿದ. ದೊಪ್ಪೆಂದು ಮಂಚದಿಂದ ಕೆಳಕ್ಕೆ ಬಿದ್ದ. ನಡೆದ ಘಟನೆ ನಿಮಗೆ ಅರ್ಥವಾಗಿರಬಹುದು. ಇಲ್ಲಿಯವರೆಗಿನ ಎಲ್ಲಾ ಘಟನೆಗಳು ನಡೆದಿದ್ದು ಪ್ರಜ್ವಲನ ಕನಸಿನಲ್ಲಿ. ಎಚ್ಚರಗೊಂಡ ಪ್ರಜ್ವಲ್ ದಿಗಿಲುಗೊಂಡ. ಸುತ್ತಲೂ ಒಮ್ಮೆ ಕಣ್ಣಾಡಿಸಿದ. ಬೆಂಕಿ ಕೀಟಗಳು ಅಲ್ಲಿಲ್ಲ. ಕಾಲಡಿಯಲ್ಲಿ ನೋಡಿದ. ನೀರೂ ಕೂಡಾ ಅಲ್ಲಿಲ್ಲ. "ಓಹ್! ಇದು ಕನಸೋ" ಎಂದುಕೊಂಡ. ಮುಖತೊಳೆದುಕೊಂಡ ಅಂಕಲ್‌ನ ಬಳಿ ಬಂದು ಕನಸಿನ ಕತೆ ಹೇಳಿದ.

'ನೀನು ಕಂಡದ್ದು ಕನಸೇ ಆಗಿದ್ದರೂ ಕೆಲವು ವೇಳೆ ವಾಸ್ತವದಲ್ಲೂ ಕಾಡಿನ ಮರಗಳಿಗೆ ಬೆಂಕಿ ಬೀಳುತ್ತದೆ. ಕಾಡಿನ ಮರಗಳು ಒಂದಕ್ಕೊಂದು ಉಜ್ಜಿದಾಗ ಘರ್ಷಣೆ ಉಂಟಾಗಿ ಬೆಂಕಿ ಹೊತ್ತಿಕೊಳ್ಳುತ್ತದೆ. ಒಂದು ಸಣ್ಣ ಕಿಡಿ ಇಡೀ ಕಾಡಿನ ನಾಶಕ್ಕೆ ಕಾರಣವಾಗಲೂಬಹುದು' ಎಂದು ಅಂಕಲ್ ಒಂದು ಚಿಕ್ಕ ಭಾಷಣ ನೀಡಿದರು. 'ವಸ್ತುಗಳು ಉರಿಯಲು ಆಮ್ಲಜನಕ ಬೇಕು ಎಂದು ಶಿಕ್ಷಕರು ಹೇಳಿದ್ದರು. ಈಗ ವಾತಾವರಣದಲ್ಲಿ ಆಮ್ಲಜನಕ ಶೇಕಡಾ 21ರಷ್ಟು ಇದೆ. ಒಂದು ವೇಳೆ ಇದು ಶೇಕಡಾ 100 ರಷ್ಟಿದ್ದರೆ ಏನಾಗ್ತಿತ್ತು ಅಂಕಲ್' ಎಂದು ಪ್ರಜ್ವಲ್ ಮರುಪ್ರಶ್ನೆ ಹಾಕಿದ.

"ಆಗ ನಿನ್ನ ಕನಸು ನಿಜವಾಗುತ್ತಿತ್ತು. ಕಾಡಿನ ಎಲ್ಲಾ ಮರಗಳು ಧಗಧಗನೇ ಹೊತ್ತಿ ಉರಿದು ಬೂದಿಯಾಗುತ್ತಿದ್ದವು. ಕಾಡೆಂಬುದೇ ಇರುತ್ತಿರುಲಿಲ್ಲ. ಆಮ್ಲಜನಕ ಹೆಚ್ಚಳದಿಂದ ಕೀಟಗಳೆಲ್ಲ ದೈತ್ಯಾಕಾರ ತಾಳುತ್ತವೆ. ಇನ್ನೂ ಅನೇಕ ಅವಘಡಗಳು ನಡೆಯುತ್ತವೆ" ಎಂದು ಅಂಕಲ್ ಹೇಳತೊಡಗಿದ. ಇದು ನಿಮ್ಮ ಪ್ರಶ್ನೆಯೂ ಆಗಿದ್ದರೆ ಮುಂದೆ ಓದಿ.

ಜೀವಿಗಳು ಬದುಕಲು ಆಮ್ಲಜನಕ ಅಗತ್ಯ. ವಾತಾವರಣದಲ್ಲಿರುವ ಆಮ್ಲಜನಕ ಉಸಿರಾಡಲು ಸಹಾಯಕವಾಗುವ ಜೊತೆಗೆ ಜೀವಿಗಳ ದೇಹಕ್ಕೆ ಬೇಕಾದ ಶಕ್ತಿಯನ್ನು ನೀಡುತ್ತದೆ. ವಾತಾವರಣದಲ್ಲಿ ಶೇಕಡಾ 21 ರಷ್ಟು ಆಮ್ಲಜನಕ ಇದೆ ಎಂಬುದು ತಿಳಿದ ವಿಚಾರ. ಇದರ ಪ್ರಮಾಣ ಹೆಚ್ಚಾದರೆ ಇನ್ನಷ್ಟು ಅನುಕೂಲವಾಗಬಹುದೇ? ಎಂಬ ಪ್ರಶ್ನೆ ಮೂಡದೇ ಇರದು. ವಾತಾವರಣದಲ್ಲಿ ಆಮ್ಲಜನಕ ಪ್ರಮಾಣದ ಹೆಚ್ಚಳವು ಅನೇಕ ತೊಂದರೆಗಳನ್ನು ತಂದೊಡ್ಡುತ್ತದೆ. ಅದು ಶೇಕಡಾ 100 ರಷ್ಟಾದರಂತೂ ತೊಂದರೆಗಳ ಸರಮಾಲೆಯನ್ನೇ ಎದುರಿಸಬೇಕಾ ಗುತ್ತದೆ. ಆಮ್ಲಜನಕ ಶುದ್ಧವಾಗಿದ್ದಷ್ಟೂ ತೊಂದರೆ ಉಂಟುಮಾಡುತ್ತದೆ. ಶುದ್ಧ ಆಮ್ಲಜನಕ ವೇಗವಾಗಿ ಫ್ರೀರ್‍ಯಾಡಿಕಲ್‌ಗಳನ್ನು ಸೃಷ್ಟಿಸುತ್ತದೆ. ಈ ಫ್ರೀರ್‍ಯಾಡಿಕಲ್‌ಗಳು ಜೀವಕೋಶಗಳ ಮೇಲೆ ಹಾನಿಯ ನ್ನುಂಟು ಮಾಡುತ್ತವೆ. ಕ್ಯಾನ್ಸರ್ ಮತ್ತು ಅಲ್ಜೈಮರ್‌ನಂತಹ ಗಂಭೀರ ಕಾಯಿಲೆಗೆ ಕಾರಣವಾಗುತ್ತವೆ.



ಆರ್.ಬಿ.ಗುರುಬಸವರಾಜ
ಶಿಕ್ಷಕರು, ಹ.ಬೊ.ಹಳ್ಳಿ

Scan For Digital Colourful
HAMPI TIMES E-paper

ಪ್ರಸ್ತುತ ಮಾನವ ಜೀವಿ ಶೇಕಡಾ 21 ರಷ್ಟು ಆಮ್ಲಜನಕ ವಾತಾವರಣಕ್ಕೆ ಹೊಂದಿಕೊಂಡಿದ್ದೇವೆ. ಒಂದುವೇಳೆ ಭವಿಷ್ಯದಲ್ಲಿ ಮಾನವ ಜೀವನ ಶುದ್ಧ ಆಮ್ಲಜನಕ ವಾತಾವರಣಕ್ಕೆ ರೂಪಾಂತರಗೊಂಡು ಅದಕ್ಕೆ ಹೊಂದಿ ಕೊಂಡರೆ, ಪ್ರತಿ ಉಸಿರಾಟದಲ್ಲೂ ತೊಂದರೆ ಅನುಭವಿಸುವಂತಾಗುತ್ತದೆ. ಪ್ರತಿ ಬಾರಿ ಶುದ್ಧ ಆಮ್ಲಜನಕವನ್ನು ಒಳ ತೆಗೆದುಕೊಂಡಾಗಲೆಲ್ಲಾ ಶ್ವಾಸಕೋಶಗಳಲ್ಲಿ ನೋವುಂಟಾಗುತ್ತದೆ. ಶುದ್ಧ ಆಮ್ಲಜನಕ ಉಸಿರಾಟದಿಂದ ಶ್ವಾಸಕೋಶಗಳಲ್ಲಿ ದ್ರವ ಸಂಗ್ರಹವಾಗುತ್ತದೆ ಮತ್ತು ತಲೆ ಸುತ್ತುವಿಕೆ ಪ್ರಾರಂಭವಾಗುತ್ತದೆ. ಪ್ರಜ್ಞೆ ಕಳೆದುಕೊಂಡು ಸಾಯುವವರೆಗೂ ಕೋಮಾ ಸ್ಥಿತಿ ತಲುಪಬಹುದು.

ಶುದ್ಧ ಆಮ್ಲಜನಕವು ಒಂದು ಡ್ರಗ್ ಇದ್ದಂತೆ. ಶುದ್ಧ ಆಮ್ಲಜನಕವು ಮಾನವ ದೇಹದಲ್ಲಿನ ಪ್ರಕ್ರಿಯೆಗಳನ್ನು ರಸಾಯನಿಕವಾಗಿ ಉಂಟುಮಾಡುತ್ತದೆ ಮತ್ತು ವೇಗಗೊಳಿಸುತ್ತದೆ. ನಾವು ಉಸಿರಾಡುವಾಗ ಆಮ್ಲಜನಕವನ್ನು ಹಿಡಿದಿಡಲು ರಕ್ತದಲ್ಲಿನ ಹೀಮೋಗ್ಲೋಬಿನ್ ಎಂಬ ಸಾರಿಗೆಯ ಅಣು ವಿಕಸನ ಹೊಂದಿದೆ. ನಾವು ಸಾಮಾನ್ಯ ಆಮ್ಲಜನಕ ಸಾಂದ್ರತೆಗಿಂತ ಹೆಚ್ಚಿನ ಗಾಳಿಯನ್ನು ಉಸಿರಾಡಿದರೆ ಶ್ವಾಸಕೋಶದಲ್ಲಿನ ಆಮ್ಲಜನಕಯುಕ್ತ ರಕ್ತವನ್ನು ಸಾಗಿಸುವ ಸಾಮರ್ಥ್ಯವನ್ನು ಮೀರಿಸುತ್ತದೆ. ಇದರ ಪರಿಣಾಮವೇನೆಂದರೆ ಹೆಚ್ಚಿನ ಆಮ್ಲಜನಕವು ಶ್ವಾಸಕೋಶದ ಮೇಲ್ಮೈ ಪ್ರೋಟೀನ್‌ಗಳೊಂದಿಗೆ ಬಂಧಿಸಲ್ಪ ಡುತ್ತದೆ. ಕೇಂದ್ರ ನರಮಂಡಲದ ಕಾರ್ಯಾಚರಣೆಯಲ್ಲಿ ಹಸ್ತಕ್ಷೇಪ ಮಾಡುತ್ತದೆ ಮತ್ತು ರೆಟಿನಾದ ಮೇಲೆ ದಾಳಿ ಮಾಡುತ್ತದೆ. ಇದರಿಂದ ದೃಷ್ಟಿ ಮಂದವಾಗುತ್ತದೆ.

ಶುದ್ಧ ಆಮ್ಲಜನಕ ಮಾನವರಿಗೆ ಕಂಟಕವಾದರೆ ಕೀಟಗಳಿಗೆ ವರದಾನವಾಗುತ್ತದೆ. ಸುಮಾರು 300 ದಶಲಕ್ಷ ವರ್ಷಗಳ ಹಿಂದೆ ಕೀಟಗಳು ಭೂಮಿಯಲ್ಲಿ ಸಂಚರಿಸದ್ದವು ಎಂಬ ಅಂಶವನ್ನು ವಿಜ್ಞಾನಿಗಳು ಶಂಕಿಸಿದ್ದಾರೆ. ಆಗ ವಾತಾವರಣದಲ್ಲಿ ಆಮ್ಲಜನಕದ ಪ್ರಮಾಣ ಶೇಕಡಾ 30 ರಷ್ಟಿತ್ತು. ಸಾಮಾನ್ಯ ಕೀಟಗಳು ಸಹ ದೈತ್ಯಾಕಾರ ಹೊಂದಿದ್ದವು ಎಂದು ವಿಜ್ಞಾನಿಗಳು ವಾದಿಸುತ್ತಾರೆ. ಅಂದರೆ ಆಮ್ಲಜನಕದ ಪ್ರಮಾಣ ಹೆಚ್ಚಾದಷ್ಟೂ ಕೀಟಗಳ ಗಾತ್ರ ಹೆಚ್ಚಳವಾಗುತ್ತದೆ. ಕೀಟಗಳ ಗಾತ್ರ ಹೆಚ್ಚಳ ನಮ್ಮ ಬದುಕಿನಲ್ಲಿ ವೈಪ್ಯರೀತ್ಯಗಳನ್ನು ತಂದೊಡ್ಡುತ್ತದೆ.

ಈಗಿನ ಆಮ್ಲಜನಕ ಪ್ರಮಾಣದಲ್ಲಿಯೇ ಕೆಲವು ವೇಳೆ ಕಾಡಿನ ಮರಗಳಲ್ಲಿ ತನ್ನಷ್ಟಕ್ಕೆ ತಾನೆ ಬೆಂಕಿ ಹೊತ್ತಿಕೊಳ್ಳುತ್ತದೆ. ಇನ್ನು ಆಮ್ಲಜನಕ ಶುದ್ಧವಾದರೆ ಭೂಮಿಯ ಮೇಲಿನ ಎಲ್ಲಾ ಕಾಡುಗಳೂ ಹೊತ್ತಿ ಉರಿಯುತ್ತವೆ. ವಾತಾವರಣ ದಲ್ಲಿ ಆಮ್ಲಜನಕ ಮಾತ್ರ ಇದ್ದರೆ ವಸ್ತುಗಳು ತಮ್ಮಷ್ಟಕ್ಕೆ ತಾವೇ ಸ್ಫೋಟಗೊಳ್ಳುತ್ತವೆ. ಭಾರೀ ಪ್ರಮಾಣದ ಬೆಂಕಿ ಕಾಣಿಸಿಕೊಳ್ಳುತ್ತದೆ. 5 ಪಟ್ಟು ವೇಗದಲ್ಲಿ ವಸ್ತುಗಳು ದಹಿಸುತ್ತವೆ. ಈಗ ಹೇಳಿ ನಿಮಿಗೆ ಶುದ್ಧ ಆಮ್ಲಜನಕ ಬೇಕೋ? ಈಗಿನ ಆಮ್ಲಜನಕ ಸಾಕೋ?

**ಕವಿ ಮನಸು**

## ಅರಳುವ ಹೂಗಳು

ಅರಳುವ ಹೂಗಳು
ಬಳಕುವ ಲತೆಗಳು
ಚಿಗುರಿದ ಹಸಿರೆಲೆಗಳು
ಸುಂದರವು ಗಿಡಮರಗಳು

ಚೈತ್ರದ ಆಗಮನವು
ಚಿಗುರೊಡೆವ ಸಂಭ್ರಮವು
ಪಕ್ಷಿಗಳ ಇಂಚರವು
ಮನಕೆ ಆನಂದವು

ಚಂದದ ಹೂದೋಟವು
ಕಣ್ಮನವ ಸೆಳೆಯುವವು
ಬೀರಲದರ ಘಮವು
ಪಸರಿಸಿತು ಚೆಲುವು

ಹೂವುಗಳ ಸೊಬಗು
ಮನೆಗೆ ಮೆರಗು
ಮಾಡಿದೆ ಬೆರಗು
ನೀಗಿಸುವುದು ಕೊರಗು

– ಚೇತನ ಭಾರ್ಗವ ಬೆಂಗಳೂರು

**ಮೈಕ್ರೋ ನ್ಯೂಸ್**

## ಅನಿಲ ಸಂಪರ್ಕ : ಸಹಾಯ ಧನಕ್ಕೆ ಅರ್ಜಿ ಆಹ್ವಾನ

**ಹಂಪಿ ಟೈಮ್ಸ್ ಚಿತ್ರದುರ್ಗ**

ನಗರ ಸಭೆಯ ಶೇ.5 ಹಾಗೂ ಶೇ.7.25 ರ ಅನುದಾನದಡಿ 2025–26ನೇ ಸಾಲಿಗೆ ದಿವ್ಯಾಂಗ ಅನಿಲ ರಹಿತ ಕುಟುಂಬಗಳಿಗೆ ಅನಿಲ ಸಂಪರ್ಕ ಪಡೆಯಲು ಸಹಾಯ ಧನ ಒದಗಿಸಲು ಹಿರಿಯೂರು ನಗರಸಭೆಯಿಂದ ಅರ್ಜಿ ಆಹ್ವಾನಿಸಲಾಗಿದೆ. ಸರ್ಕಾರಿ ಸ್ವಾಮ್ಯದ ಸಂಸ್ಥೆಗ ಳಿಂದ 1 ಸಿಲಿಂಡರ್ ಹಾಗೂ 1 ಸ್ಟೌವ್‌ನ್ನು ಮಾರ್ಗಸೂಚಿಗಳ ಅನುಸಾರ ನೀಡಲಾಗುವುದು. ಶೇ.5 ಹಾಗೂ ಶೇ.7.25 ರ ಅನುದಾನದಡಿ ಬಡ ವಿದ್ಯಾರ್ಥಿಗಳಿಗೆ ವಿಶೇಷ ನೆರವು ಸಹ ನೀಡಲಾಗತ್ತದೆ. ನಗರ ಸಭೆ ವ್ಯಾಪ್ತಿಯ ದಿವ್ಯಾಂಗ ಹಾಗೂ ಬಡ ವಿದ್ಯಾರ್ಥಿಗಳು ಜೂನ್ 10 ರ ಒಳಗೆ ಅರ್ಜಿ ಸಲ್ಲಿಸಿ ಈ ಸೌಲಭ್ಯದ ಸದುಪಯೋಗ ಪಡೆದುಕೊಳ್ಳುವಂತೆ ಪೌರಾ ಯುಕ್ತ ಎ.ವಾಸೀಂ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



### ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ.ಕೆ.ವಿ ತ್ರಿಲೋಕ ಚಂದ್ರ ಸೂಚನೆ | ಜಿಲ್ಲಾ ಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆ

## ಮಳೆ ಹಾನಿ ಪರಿಹಾರ ಮೂರು ದಿನದೊಳಗೆ ನೀಡಬೇಕು

**ಹಂಪಿ ಟೈಮ್ಸ್ ಬಳ್ಳಾರಿ**

ಪೂರ್ವ ಮುಂಗಾರು ಆರಂಭಗೊಂಡ ಹಿನ್ನಲೆಯಲ್ಲಿ ಮಳೆಯಿಂದಾಗುವ ಹಾನಿಯನ್ನು ಸೂಕ್ತ ಪರಿಶೀಲನೆ ನಡೆಸಿ 72 ಗಂಟೆಯೊಳಗೆ ಹಾನಿ ಪರಿಹಾರ ಒದಗಿಸಲು ಮುಂದಾಗಬೇಕು ಎಂದು ಜಿಪಂ ಆಡಳಿತಾಧಿಕಾರಿಯೂ ಆಗಿರುವ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ.ಕೆ.ವಿ.ತ್ರಿಲೋಕಚಂದ್ರ ಅವರು ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ನ ನಜೀರ್ ಸಭಾಂಗಣದಲ್ಲಿ ಶುಕ್ರವಾರ ಏರ್ಪಡಿಸಿದ್ದ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ (20 ಅಂಶ ಸೇರಿದಂತೆ) ಏಪ್ರಿಲ್ ಮಾಹೆಯ ಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ ಮಾಹಿತಿಯನ್ವಯ ಈ ಬಾರಿ ವಾಡಿಕೆಗಿಂತ ಹೆಚ್ಚು ಮಳೆಯಾಗುವ ಸಂಭವವಿದ್ದು, ಈಗಾಗಲೇ ಜಿಲ್ಲೆಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಹಾಗಾಗಿ ಆಯಾ ತಾಲ್ಲೂಕು ತಹಶೀಲ್ದಾರರು ಹಾಗೂ ಕಂದಾಯ ಅಧಿಕಾರಿಗಳು ಈ ಕುರಿತು ಎಚ್ಚರ ವಹಿಸಬೇಕು ಎಂದು ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿ ವಾರ್ಷಿಕ 599.5 ಮಿ.ಮೀ ವಾಡಿಕೆ ಮಳೆಯಿದ್ದು, ಕಳೆದ ವರ್ಷ ಮೇ 20 ರವರೆಗೆ 53.6 ಮಿ.ಮೀ ಮಳೆಯಾಗಿದೆ ಹಾಗೂ ಪ್ರಸ್ತುತ ವರ್ಷ 88.4 ಮಿ.ಮೀ ಮಳೆಯಾಗಿ ಸುಮಾರು ಶೇ.64 ರಷ್ಟು ಹೆಚ್ಚು ಮಳೆ ಸುರಿದಿದೆ. ಅದೇರೀತಿಯಾಗಿ ಜಿಲ್ಲೆಯಲ್ಲಿ ಬಿತ್ತನೆ ಬೀಜ ಹಾಗೂ ರಸಗೊಬ್ಬರದ ದಾಸ್ತಾನು ಸಮರ್ಪಕವಾಗಿದ್ದು, ಬಿತ್ತನೆ ಬೀಜ ಮತ್ತು ರಸಗೊಬ್ಬರಗಳ ಆಭಾವದ ಕೊರತೆಯಿಲ್ಲ ಎಂದು ಜಂಟಿ ಕೃಷಿ ನಿರ್ದೇಶಕ ಸೋಮಸುಂದರ್ ಅವರು ಸಭೆಗೆ ತಿಳಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು, ರೈತರಿಗೆ ಕಳಪೆ ಗುಣಮಟ್ಟದ ಬಿತ್ತನೆ ಬೀಜ ಮತ್ತು ರಸಗೊಬ್ಬರ ಪೂರೈಕೆಯಾಗದಂತೆ ಎಚ್ಚರವಹಿಸಬೇಕು. ದಾಸ್ತಾನು ಲಭ್ಯತೆ ಕುರಿತು ರೈತರಿಗೆ ಮಾಹಿತಿ ನೀಡಬೇಕು. ರೈತ ಸಂಪರ್ಕ ಕೇಂದ್ರಗಳಲ್ಲಿ ದಾಸ್ತಾನಿನ ಕುರಿತು ಮಾಹಿತಿ ಪ್ರದರ್ಶಿಸಬೇಕು. ರೈತರು ಕಾಯುವುದು, ನೂಕು-ನುಗ್ಗಲು ಹಾಗೂ ಇತರೆ ವ್ಯವಸ್ಥೆಗಳಿಗೆ ತೊಂದರೆಯಾಗದಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಕೃಷಿ ಪರಿಕರಗಳ ಪರಿವೀಕ್ಷರ ತಂಡಗಳನ್ನು ರಚಿಸಿ



ಬಿತ್ತನೆ ಬೀಜ, ರಸಗೊಬ್ಬರ ಮತ್ತು ಕೀಟನಾಶಕಗಳ ಗುಣಮಟ್ಟ ಹಾಗೂ ಬೆಲೆ ನಿಯಂತ್ರಣಕ್ಕೆ ಕ್ರಮವಹಿಸಲಾಗಿದೆ. ಕೃಷಿ ಪರಿಕರ ಮಾರಾಟಗಾರರು ಗುಣಮಟ್ಟದ ಬಿತ್ತನೆ ಬೀಜ, ರಸಗೊಬ್ಬರ ಮತ್ತು ಕೀಟನಾಶಕಗಳನ್ನೇ ಮಾರಾಟ ಮಾಡಬೇಕು ತಪ್ಪಿದಲ್ಲಿ ಕಾನೂನು ರೀತ್ಯ ಕಠಿಣ ಕ್ರಮ ಜರುಗಿಸಲಾಗುವುದು ಎಂಬುದರ ಕುರಿತು ಸಭೇ ನಡೆಸುವ ಮೂಲಕ ಅವರಿಗೆ ಮಾಹಿತಿ ನೀಡಲಾಗುತ್ತಿದೆ ಎಂದು ಜಂಟಿ ಕೃಷಿ ನಿರ್ದೇಶಕ ಸೋಮಸುಂದರ್ ಅವರು ಸಭೆಗೆ ವಿವರಿಸಿದರು.

ಜಿಲ್ಲೆಯಲ್ಲಿ ಕುಡಿಯುವ ನೀರು ಸರಬರಾಜು ಮೂಲಗಳ ಬಗ್ಗೆ ನಿಗಾವಹಿಸಬೇಕು. ಕಲುಷಿತ ನೀರು ಕಲಬೆರಕೆಗೊಳ್ಳದಂತೆ ಎಚ್ಚರವಹಿಸಬೇಕು. ಮುಖ್ಯವಾಗಿ ಕುಡಿಯುವ ನೀರಿನ ಪೈಪ್ ಲೈನ್‌ಗಳು ಸೋರಿಕೆ ಕಂಡುಬಂದಲ್ಲಿ ಕೂಡಲೇ ರಿಪೇರಿ ಮಾಡಿಸಲು ಕ್ರಮವಹಿಸಬೇಕು. ಕುಡಿಯುವ ನೀರು ಸಮಸ್ಯೆದೋರುವ ಕುರಿತು ಮಾಧ್ಯಮಗಳಲ್ಲಿ ವರದಿಯಾದರೇ, ಕೂಡಲೇ ಎಚ್ಚೆತ್ತುಕೊಳ್ಳಬೇಕು. ಮುಂಗಾರು ಪೂರ್ವ ಮಳೆ ಆರಂಭಗೊಂಡಿರುವ ಹಿನ್ನಲೆಯಲ್ಲಿ ಮಳೆ ನೀರು ಸರಾಗವಾಗಿ ಹರಿಯಲು ರಾಜಕಾಲುವೆಗಳನ್ನು ಸ್ವಚ್ಛಗೊಳಿಸಬೇಕು ಎಂದು ಪಾಲಿಕೆ ಆಯುಕ್ತರು, ತಾಪಂ ಇಒಗಳು ಕಾಳಜಿ ವಹಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಸೂಚಿಸಿದರು.

ಕೋರೊನಾ ಉಲ್ಬಣಗೊಳ್ಳುತ್ತಿರುವ ಹಿನ್ನಲೆಯಲ್ಲಿ ಸೂಕ್ತ ನಿಗಾ ವಹಿಸಬೇಕು ಎಂದು ಜಿಲ್ಲಾ ಆರೋಗ್ಯಾಧಿಕಾರಿಗಳಿಗೆ ನಿರ್ದೇಶನ ನೀಡಿದ ಉಸ್ತುವಾರಿ ಕಾರ್ಯದರ್ಶಿಗಳು, ಈವರೆಗೆ ಜಿಲ್ಲೆಯಲ್ಲಿ ವರದಿಯಾದ ಡೆಂಗ್ಯೂ ಪ್ರಕರಣಗಳ ಬಗ್ಗೆ ಮಾಹಿತಿ ಪಡೆದುಕೊಂಡು ಸೂಕ್ತ ಸಲಹೆ ಸೂಚನೆ ನೀಡಿದರು.

ಜಿಲ್ಲೆಯ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂತ ಬಗ್ಗೆ ವಿಚಾರಿಸಿದ ಶಾಲಾಶಿಕ್ಷಣಇಲಾಖೆಯಆಯುಕ್ತರಾದಡಾ.ಕೆ.ವಿ.ತ್ರಿಲೋಕಚಂದ್ರ ಅವರು, ಎಸ್‌ಎಸ್‌ಎಲ್‌ಸಿ–2 ಪರೀಕ್ಷೆಗೆ ಕೈಗೊಂಡಿರುವ ಸಿದ್ದತೆ ಕುರಿತು ಡಿಡಿಪಿಐ ಅಧಿಕಾರಿಗಳಿಂದ ಮಾಹಿತಿ ಪಡೆದರು.

ಇದಕ್ಕೆ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಉಮಾದೇವಿ ಅವರು ಮಾಹಿತಿ ನೀಡಿ, ಜಿಲ್ಲೆಯಲ್ಲಿ ಎಸ್‌ಎಸ್‌ಎಲ್‌ಸಿ–2 ಪರೀಕ್ಷೆಗೆ ಒಟ್ಟು 9,999 ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದು, ಎಲ್ಲಾ ಮಕ್ಕಳಿಗೆ ಶಿಕ್ಷಕರು ವಿಶೇಷ ತರಗತಿಗಳ ಮೂಲಕ ಅಭ್ಯಾಸಿಸಲು ಮಾರ್ಗದರ್ಶನ ಮಾಡಿದ್ದಾರೆ ಎಂದರು.

ಬಳಿಕ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಅವರು ಮಾತನಾಡಿ, ಇದೇ ಮೇ 29 ರಿಂದ ಶಾಲಾ ವಿಭಾಗದ ತರಗತಿಗಳು ಆರಂಭಗೊಳ್ಳಿದ್ದು, ಎಲ್ಲಾ ಶಾಲೆಗಳಲ್ಲಿ ಸ್ವಚ್ಛತೆ ಕಾರ್ಯ ಕೈಗೊಳ್ಳಬೇಕು. ಪಠ್ಯ–ಪುಸ್ತಕ ವಿತರಣೆ ಮಾಡಬೇಕು. ಶಾಲೆಗಳ ಅವರಣದಲ್ಲಿ ಹೊರಗಿನವರು ಬಾರದಂತೆ ನೋಡಿಕೊಳ್ಳಬೇಕು ಈ ಕುರಿತು ಬಿಆರ್‌ಓ ಮತ್ತು ಸಿಆರ್‌ಪಿಗಳಿಗೆ ನಿರ್ದೇಶನ ನೀಡಬೇಕು ಎಂದರಲ್ಲದೇ, ಜಿಲ್ಲೆಯಲ್ಲಿ ಶಾಲೆಗಳ ಆಸ್ತಿ ನೋಂದಣಿಗೆ ಬಾಕಿಯಿರುವ ಶಾಲೆಗಳ ಮಾಹಿತಿ ನೀಡಬೇಕು. ಈ ಬಗ್ಗೆ ಆಯಾ ತಾಲ್ಲೂಕಿನ ಶಹಶೀಲ್ದಾರರಿಗೆ ಸೂಚಿಸಲಾಗುವುದು ಎಂದು ಡಿಡಿಪಿಐ ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲೆಯಲ್ಲಿ ಲೋಕೋಪಯೋಗಿ ಮತ್ತು ಪಂಚಾಯತ್‌ರಾಜ್ ಅಭಿವೃದ್ಧಿ ಇಲಾಖೆಗಳ ಕಾಮಗಾರಿಗಳು ಗುಣಮಟ್ಟತೆ ಕುಂಠಿತಗೊಳ್ಳುತ್ತಿವೆ. ಶಾಲೆಯೊಂದರ ರಿಪೇರಿ ಕಾಮಗಾರಿಯು ಮತ್ತೆ ರಿಪೇರಿಗೆ ಬಂದಿದ್ದು, ಈ ಕುರಿತು ಅಸಮಾಧಾನ ವ್ಯಕ್ತಪಡಿಸಿದ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ಜಿಪಂ ಸಿಇಒ ಅವರಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ರಾಜ್ಯಾದಾಂದ್ಯತ ನಡೆಯುತ್ತಿರುವ ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ ಕುರಿತು ಜಿಲ್ಲೆಯಲ್ಲಿ ಈವರೆಗೆ ಆಗಿರುವ ಅಭಿವೃದ್ಧಿ ಕುರಿತು ಮಾಹಿತಿ ಪಡೆದುಕೊಂದರಲ್ಲದೇ, ಸಮಸ್ಯೆ ಕಂಡುಬಂದಲ್ಲಿ ಗಮನಕ್ಕೆ ತರಬೇಕು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್, ಜಿಪಂ ಉಪಕಾರ್ಯದರ್ಶಿ ಗಿರಿಜಾ ಶಂಕರ್, ಜಿಪಂ ಯೋಜನಾ ನಿರ್ದೇಶಕ ವಾಗೀಶ್ ಶಿವಾಚಾರ್ಯ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ತಾಪಂ ಇಒಗಳು ಉಪಸ್ಥಿತರಿದ್ದರು.

## ಜಿಲ್ಲೆ ಮರುನಾಮಕರಣ ರಾಜ್ಯ ಸರ್ಕಾರಕ್ಕೆ ತೀರ್ಮಾನಿಸುವ ಅಧಿಕಾರವಿದೆ : ಸಿಎಂ

**ಮೈಸೂರು (ಕೆ.ಆರ್.ನಗರ):**

ರಾಮನಗರಕ್ಕೆ ಬೆಂಗಳೂರು ದಕ್ಷಿಣ ಜಿಲ್ಲೆ ಎಂದು ಮರುನಾಮಕರಣ ಮಾಡಲು ರಾಜ್ಯ ಸರ್ಕಾರಕ್ಕೆ ಅಧಿಕಾರವಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.



ಅವರು ಶುಕ್ರವಾರ ಮಾಧ್ಯಮದವರೊಂದಿಗೆ ಮಾತನಾಡಿದರು. ರಾಮನಗರ ಜಿಲ್ಲೆಯನ್ನು ಬೆಂಗಳೂರು ದಕ್ಷಿಣ ಎಂದು ಮರುನಾಮಕರಣ ಮಾಡುವ ಮೂಲಕ ಜಿಲ್ಲೆಯ ಇತಿಹಾಸವನ್ನು ತಿರುಚಲಾಗುತ್ತಿದೆ ಎಂದು ಕೇಂದ್ರ ಸಚಿವ ಕುಮಾರಸ್ವಾಮಿಯವರು ಟೀಕೆ ಮಾಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಅಲ್ಲಿನ ಜನರ ಜನಾಭಿಪ್ರಾಯವನ್ನು ಪಡೆದೇ ಈ ನಿರ್ಣಯವನ್ನು ಕೈಗೊಳ್ಳಲಾಗಿದೆ. ಕುಮಾರಸ್ವಾಮಿಯವರು ರಾಮನಗರ ಜಿಲ್ಲೆ ಸೃಜಿಸುವಾಗ, ಅಲ್ಲಿನ ಇತಿಹಾಸದ ಬಗ್ಗೆ ಯೋಚಿಸಿ ರಲಿಲ್ಲವೇ ಎಂದು ಮರುಪ್ರಶ್ನಿಸಿದರು.

**ಇ.ಡಿ ಹಾಗೂ ಐ.ಟಿ ದಾಳಿಗಳು ರಾಜಕೀಯ ಪ್ರೇರಿತವಾಗಬಾರದು:** ಜಾರಿನಿರ್ದೇಶನಾಲಯ ತನ್ನ ಎಲ್ಲೆಯನ್ನು ಮೀರುತ್ತಿರುವ ಬಗ್ಗೆ ಸರ್ವೋಚ್ಚ ನ್ಯಾಯಾಲಯ ಗಮನಿಸಿರುವ ಕುರಿತು ಪತ್ರರ್ತರ ಪ್ರಶ್ನೆಗೆ ಉತ್ತರಿಸುತ್ತಾ, ಇ.ಡಿ ಯವರು, ಐ.ಟಿ.ಯವರು ತನಿಖೆ ಮಾಡುವುದನ್ನೇ ಆಗಲಿ ಅಥವಾ ಕಪ್ಪು ಹಣ ವ್ಯವಹಾರವನ್ನು ಪತ್ತೆ ಹಚ್ಚುವುದನ್ನೇ ಆಗಲಿ ಆಕ್ಷೇಪಿಸುವುದಿಲ್ಲ. ಆದರೆ ಇ.ಡಿ ಮತ್ತು ಐ.ಟಿ ದಾಳಿಗಳು ರಾಜಕೀಯ ದುರುದ್ದೇಶದಿಂದ ನಡೆಯಕೂಡದು. ಪ್ರಸ್ತುತ ಗೃಹ ಸಚಿವ ಜಿ.ಪರಮೇಶ್ವರ ಅವರ ಶಿಕ್ಷಣ ಸಂಸ್ಥೆಯ ಮೇಲೆ ಇ.ಡಿ.ದಾಳಿ ರಾಜಕೀಯ ಪ್ರೇರಿತ. ಸುಪ್ರೀಂ ಕೋರ್ಟ್ ನವರು ಯಾವ ಪ್ರಕರಣಕ್ಕೆ ಸಂಬಂಧಿಸಿ ದಂತೆ ಈ ರೀತಿ ಅವಲೋಕಿಸಿದ್ದಾರೆ ಎಂದು ತೀರ್ಪು ಪರಿಶೀಲಿಸಿದ ನಂತರವಷ್ಟೇ ತಿಳಿಯಲಿದೆ ಎಂದರು.

**ಒಂದು ವರ್ಷದಿಂದ ಅಪರಾಧ ಪ್ರಕರಣಗಳು ಕಡಿಮೆಯಿದೆ:** ರಾಜ್ಯದಲ್ಲಿ ಅತ್ಯಾಚಾರ ಪ್ರಕರಣಗಳು ಹೆಚ್ಚುತ್ತಿರುವ ಬಗ್ಗೆ ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯೆ ನೀಡುತ್ತಾ, ಅಪರಾಧ ಪ್ರಕರಣಗಳ ವಿರುದ್ಧ ಕಠಿಣ ಕ್ರಮವಾಗುತ್ತದೆ. ಆದರೆ ಕಳೆದ ಒಂದು ವರ್ಷದಿಂದ ರಾಜ್ಯದಲ್ಲಿ ಅಪರಾಧಗಳ ಸಂಖ್ಯೆ ಕಡಿಮೆಯಾಗಿದ್ದು, ಬಿಜೆಪಿ ಅವಧಿಗೆ ಹೋಲಿಸಿದರೆ ನಮ್ಮ ಸರ್ಕಾರದ ಅವಧಿಯಲ್ಲಿ ಅಪರಾಧಗಳ ಸಂಖ್ಯೆ ಕಡಿಮೆಯಿದೆ. ಅಪರಾಧಗಳನ್ನು ಗಮನಾರ್ಹವಾಗಿ ಕಡಿಮೆ ಮಾಡಲು ಸರ್ಕಾರ ಖಂಡಿತ ಪ್ರಯತ್ನಿಸುತ್ತದೆ ಎಂದರು.

**ಕೇಂದ್ರ ಸರ್ಕಾರ ಕೋವಿಡ್ ಎಚ್ಚರಿಕಾ ಕ್ರಮ ತೆಗೆದುಕೊಳ್ಳಲಿ :** ಸಿಂಗಾಪುರ, ಹಾಂಕಾಂಗ್ ದೇಶದಲ್ಲಿ ಕೋವಿಡ್ ಪ್ರಕರಣ ಹೆಚ್ಚುತ್ತಿದ್ದು, ವಿದೇಶದಿಂದ ಆಗಮಿಸು ವವರ ಕೋವಿಡ್ ಪರೀಕ್ಷೆ ನಡೆಸಲು ಕೇಂದ್ರ ಸರ್ಕಾರ ಯಾವುದೇ ಕ್ರಮ ವಹಿಸದೇ, ಇಲ್ಲಿಯೂ ಕೋವಿಡ್ ಪ್ರಕರಣಗಳು ಹೆಚ್ಚುವ ಸಾಧ್ಯತೆಯಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಕೋವಿಡ್ ಪ್ರಕರಣಗಳಲ್ಲಿ ಏರಿಕೆ ಕಂಡುಬರುತ್ತಿದ್ದ ಸಂದರ್ಭದಲ್ಲಿ ಕೇಂದ್ರ ಸರ್ಕಾರ ಈ ಬಗ್ಗೆ ಎಚ್ಚರಿಕಾ ಕ್ರಮಗಳನ್ನು ತೆಗೆದು ಕೊಳ್ಳಲು ತ್ವರಿತ ನಿರ್ಧಾರಗಳನ್ನು ತೆಗೆದುಕೊಳ್ಳಬೇಕು ಎಂದರು.

**ದೇಣಿಗೆ ನೀಡುವುದು ತಪ್ಪಲ್ಲ :** ಯಂಗ್ ಇಂಡಿಯಾ ಸಂಸ್ಥೆಗೆ ದೇಣಿಗೆ ನೀಡಿರುವ ಬಗ್ಗೆ ಡಿಸಿಎಂ ಹಾಗೂ ಮಾಜಿ ಸಂಸದ ಡಿ.ಕೆ.ಸುರೇಶ್ ರವರ ಮೇಲೆ ಚಾರ್ಜ್ ಶೀಟ್ ಸಲ್ಲಿಕೆಯಾಗಿರುವ ಬಗ್ಗೆ ಮಾತನಾಡಿ, ಯಾವುದೇ ಸಂಸ್ಥೆಗೆ ದೇಣಿಗೆ ನೀಡುವುದು ತಪ್ಪಲ್ಲ ಎಂದರು.

OUR OFFERINGS:
Sales & Distribution – Genuine Toshiba photocopiers and GALTECH Smart panels
Service & Maintenance – Expert technical support and AMC services
Consumables & Accessories – Genuine spare parts
TOSHIBA GALTECH
M:9686663132
Transforming EDUCATION with Galtech's Interactive Flat Panel Display
SAI MANI ENTERPRISES
Authorized Dealer of Toshiba Photocopiers & GALTECH Sirius interactive flat panel display for Vijayanagara, Bellary and Koppal Districts
# 545/A 6th Ward, Hampi Road, HOSAPETE-583201, Vijayanagara Dist.

# ರಾಸಾಯನಿಕ ಗೊಬ್ಬರ ಸುರಿಯುವುದನ್ನು ತಪ್ಪಿಸಿ

## ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚನೆ | ಮಣ್ಣಿನ ಫಲವತ್ತತೆ ಆಧರಿಸಿ ಬೆಳೆ ಬೆಳೆಯಲು ರೈತರಿಗೆ ಸೂಚಿಸಿ

**ಹಂಪಿ ಟೈಮ್ಸ್ ಚಿತ್ರದುರ್ಗ**

ಮುಂಗಾರು ಪೂರ್ವದಲ್ಲಿಯೇ ಜಿಲ್ಲೆಯಲ್ಲಿ ಉತ್ತಮ ಮಳೆಯಾಗಿದೆ. ರೈತರು ಭೂಮಿಯನ್ನು ಹದ ಮಾಡಿಕೊಂಡು ಬಿತ್ತನೆಗೆ ಸಿದ್ಧತೆ ನಡೆಸಿದ್ದಾರೆ. ಕೃಷಿ ಅಧಿಕಾರಿಗಳು ಬಿತ್ತನೆ ಬೀಜ ಹಾಗೂ ಅಗತ್ಯ ರಸಗೊಬ್ಬರಗಳು ಕೊರತೆಯಾಗದಂತೆ ಕ್ರಮ ವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಕೃಷಿ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ 2025-26ನೇ ಸಾಲಿನ ಮುಂಗಾರು ಹಂಗಾಮಿನ ಪೂರ್ವ ಸಿದ್ಧತೆ, ಬಿತ್ತನೆ ಬೀಜ ಮತ್ತು ರಸಗೊಬ್ಬರ ಇತ್ಯಾದಿ ಕೃಷಿ ಪರಿಕರಗಳ ಯೋಜನೆ ಮತ್ತು ಲಭ್ಯತೆ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.




ಬಿತ್ತನೆ ಬೀಜ ಹಾಗೂ ರಸಗೊಬ್ಬರಕ್ಕೆ ರೈತರು ಸಾಲುಗಟ್ಟಿ ನಿಲ್ಲುವಂತಾಗಬಾರದು. ಕಾಳ ಸಂತೆಯಲ್ಲಿ ಹೆಚ್ಚಿನ ದರಕ್ಕೆ ಮಾರಾಟವಾಗುವುದನ್ನು ಅಧಿಕಾರಿಗಳು ತಡೆಗಟ್ಟಬೇಕು. ಬೇಡಿಕೆಗೆ ಅನುಸಾರವಾಗಿ ಬಿತ್ತನೆ ಬೀಜ ಹಾಗೂ ರಸಗೊಬ್ಬರದ ಅಗತ್ಯ ದಾಸ್ತಾನು ಶೇಖರಿಸಿಡಬೇಕು. ಕೃಷಿ ಇಲಾಖೆಯ ಸಂಚಾರಿ ಮಣ್ಣು ಪರೀಕ್ಷಾ ಕೇಂದ್ರಗಳ ಸದುಪಯೋಗಪಡಿಸಿಕೊಂಡು ರೈತರ ಜಮೀನಿನ ಮಣ್ಣಿನ ಪರೀಕ್ಷೆ ನಡೆಸಬೇಕು. ರೈತರಿಗೆ ಮಣ್ಣಿನ ಫಲವತ್ತತೆಯ ವರದಿಯನ್ನು ನೀಡಬೇಕು. ಇದನ್ನು ಆಧರಿಸಿ ಬಿತ್ತನೆ ಬೀಜ ಹಾಗೂ ರಸಗೊಬ್ಬರ ಬಳಕೆ ಮಾಡಲು ರೈತರಿಗೆ ಅಧಿಕಾರಿಗಳು ಶಿಫಾರಸ್ಸು ಮಾಡಬೇಕು. ಇದರಿಂದ ಅನಾವಶ್ಯಕವಾಗಿ ಮಣ್ಣಿಗೆ ರಾಸಾಯನಿಕ ಗೊಬ್ಬರಗಳನ್ನು ಸುರಿಯುವುದು ತಪ್ಪುತ್ತದೆ. ಮಣ್ಣಿನ ಫಲವತ್ತತೆ ಆಧರಿಸಿ ಬೆಳೆ ಬೆಳೆಯುವುದರಿಂದ ರೈತರಿಗೆ ಆರ್ಥಿಕವಾಗಿ ಹೆಚ್ಚಿನ ನಷ್ಟ ಉಂಟಾಗುವುದಿಲ್ಲ. ರೈತರು ಸಾಲದ ಸುಳಿಯಲ್ಲಿ ಸಿಲುಕುವುದಿಲ್ಲ. ರೈತರು ಕೃಷಿಯೊಂದಿಗೆ ಪಶು ಸಂಗೋಪನೆ ಕೈಗೊಂಡು ಸಮಗ್ರ ಬೇಸಾಯ ಪದ್ಧತಿಯನ್ನು ಅಳವಡಿಸಿಕೊಳ್ಳಲು ಪ್ರೋತ್ಸಾಹ ನೀಡಬೇಕು. ಕೊಟ್ಟಿಗೆ ಹಾಗೂ ಸಾವಯವ ಗೊಬ್ಬರಗಳನ್ನು ಬಳಸುವುದರಿಂದ ಮಣ್ಣಿನ ಫಲವತ್ತತೆ ಹಾಳಾಗುವುದಿಲ್ಲ. ಈ ಕುರಿತು ರೈತರಿಗೆ ಮನದಟ್ಟು ಮಾಡಿಕೊಡಬೇಕು. ಡಿಎಪಿ ರಸಗೊಬ್ಬರಕ್ಕೆ ಪರ್ಯಾಯವಾಗಿ ಇತರೆ ಸಂಯುಕ್ತ ರಸ ಗೊಬ್ಬರಗಳನ್ನು ಬಳಸಲು ರೈತರಿಗೆ ಸಲಹೆ ನೀಡಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ ಟಿ ಕುಮಾರಸ್ವಾಮಿ ಹೇಳಿದರು.

**12,924 ಕ್ವಿಂಟಾಲ್ ಬಿತ್ತನೆ ಬೀಜ ಸಂಗ್ರಹಣೆ:** ಜನವರಿಯಿಂದ ಮೇ ತಿಂಗಳವರೆಗೆ ಜಿಲ್ಲೆಯಲ್ಲಿ 79.9 ಮಿ.ಮೀ. ವಾಡಿಕೆ ಮಳೆ ನಿರೀಕ್ಷೆ ಇತ್ತು. ಆದರೆ ಜಿಲ್ಲೆಯಲ್ಲಿ ಈವರೆಗೆ 135.8 ಮಿ.ಮೀ.ಮಳೆಯಾಗಿದೆ. ಇದರಿಂದಾಗಿ ಜಿಲ್ಲೆಯಲ್ಲಿ ಬಿತ್ತನೆ ಚಟುವಟಿಕೆಗಳು ಗರಿ ಗೆದರಿವೆ. ಶೇಂಗಾ, ಮೆಕ್ಕೆಜೋಳ, ರಾಗಿ, ತೊಗರಿ, ಸೂರ್ಯಕಾಂತಿ, ಹೆಸರು, ಹಲಸಂದಿ, ಸಿರಿಧಾನ್ಯ, ಹತ್ತಿ ಬೆಳೆಗಳನ್ನು ಹೆಚ್ಚಾಗಿ ಬೆಳೆಯುತ್ತಾರೆ. ಕೃಷಿ ಇಲಾಖೆಯಿಂದ ಒಟ್ಟು 31454 ಕ್ವಿಂಟಾಲ್ ಬಿತ್ತನೆ ಬೀಜದ ಗುರಿ ನಿಗದಿ ಪಡಿಸಿಕೊಂಡಿದ್ದು, ಈಗಾಗಲೇ 12,924 ಕ್ವಿಂಟಾಲ್ ಬಿತ್ತನೆ ಬೀಜದ ದಾಸ್ತಾನು ಸಂಗ್ರಹಣೆ ಮಾಡಲಾಗಿದೆ. ಜುಲೈ 2ನೇ ವಾರದವರೆಗೂ ಬಿತ್ತನೆ ಮಾಡಲು ಅವಕಾಶವಿದೆ ಎಂದು ಕೃಷಿ ಇಲಾಖೆ ಜಂಟಿ ಕೃಷಿ ನಿರ್ದೇಶಕ ಮಂಜುನಾಥ್ ಸಭೆಯಲ್ಲಿ ಮಾಹಿತಿ ನೀಡಿದರು.

ಜಿಲ್ಲೆಯಲ್ಲಿ ಏಪ್ರಿಲ್-25 ರಿಂದ ಮಾರ್ಚ್-26 ವರೆಗೆ ಒಟ್ಟು 94,546 ಮೆಟ್ರಿಕ್ ಟನ್ ರಸಗೊಬ್ಬರದ ಬೇಡಿಕೆ ನಿರೀಕ್ಷೆಯಿದೆ. ಇದುವರೆಗೂ ಒಟ್ಟು 32,045 ಮೆಟ್ರಿಕ್ ಟನ್ ಹೊಸ ಗೊಬ್ಬರ ದಾಸ್ತಾನು ಸಂಗ್ರಹಿಸಲಾಗಿದ್ದು, 12,567 ಮೆಟ್ರಿಕ್ ಟನ್ ಮಾರಾಟವಾಗಿದೆ. 19,477 ಮೆಟ್ರಿಕ್ ಟನ್ ಗೊಬ್ಬರ ಉಳಿಕೆಯಾಗಿದೆ. ಕೃಷಿ ಇಲಾಖೆಯ 22 ರೈತಸಂಪರ್ಕ ಕೇಂದ್ರ ಹಾಗೂ 13 ಹೆಚ್ಚುವರಿ ವಿತರಣಾ ಕೇಂದ್ರಗಳಲ್ಲಿ ಸಹಾಯ ಧನದಡಿ ಬಿತ್ತನೆ ಬೀಜಗಳನ್ನು ವಿತರಣೆ ಮಾಡಲಾಗುವುದು. ಇದನ್ನು ಹೊರತುಪಡಿಸಿ 59 ಕೃಷಿಪತ್ತಿನ ಸಹಕಾರ ಸಂಘಗಳು, 26 ರೈತ ಉತ್ಪಾದಕ ಸಂಸ್ಥೆಗಳು, 283 ಖಾಸಗಿ ಮಾರಾಟಗಾರರು ಬಿತ್ತನೆ ಬೀಜ ಮಾರಾಟ ಮಾಡಲಿದ್ದಾರೆ. ಕಳಪೆ ಹಾಗೂ ಹೆಚ್ಚಿನ ದರಕ್ಕೆ ಬಿತ್ತನೆ ಬೀಜ ಹಾಗೂ ರಸಗೊಬ್ಬರ ಮಾರಾಟ ಮಾಡದಂತೆ ಈಗಾಗಲೇ ಸಂಬಂಧಪಟ್ಟವರಿಗೆ ಎಚ್ಚರಿಕೆ ನೀಡಲಾಗಿದೆ. ತೊಗರಿ, ಶೇಂಗಾ, ಸೂರ್ಯಕಾಂತಿ ಮುಸುಕಿನ ಜೋಳ, ರಾಗಿ ಮತ್ತು ಸಿರಿಧಾನ್ಯ ಬೆಳೆಗಳಲ್ಲಿ ಉತ್ತಮ ಇಳುವರಿ ಪಡೆಯಲು ಸುಧಾರಿತ ಬಿತ್ತನೆ ಬೀಜ ಹಾಗೂ ನವೀನ ತಾಂತ್ರಿಕತೆಗಳನ್ನು ಅಳವಡಿಸಿಕೊಳ್ಳಲು ರೈತರಿಗೆ ಶಿಫಾರಸ್ಸು ಮಾಡಲಾಗುತ್ತಿದೆ. ರಾಷ್ಟ್ರೀಯ ಖಾದ್ಯ ತೈಲ ಅಭಿಯಾನದಡಿ ಎಣ್ಣೆಕಾಳುಗಳಾದ ಶೇಂಗಾ, ಸೂರ್ಯಕಾಂತಿ, ಹರಳೆ ಬಿತ್ತನೆ ಮಾಡಲು ಪ್ರೋತ್ಸಾಹ ನೀಡಲಾಗುತ್ತಿದೆ. ಯೂರಿಯಾ, ಡಿಎಪಿ, ಎಂಓಪಿ, ಕಾಂಪ್ಲೆಕ್ಸ್ ಹಾಗೂ ಎಸ್‌ಎಸ್‌ಪಿ ರಸಗೊಬ್ಬರಗಳ ಜೊತೆಗೆ ಲಘು ಪೋಷಕಾಂಶಗಳು, ಪೋಟಾಸಿಯಂ ಹಾಗೂ ಗಂಧಕ ಸಾರಗಳನ್ನು ಒದಗಿಸುವ ಹೊಸ ಗೊಬ್ಬರಗಳನ್ನು ಬಳಸಲು ರೈತರಿಗೆ ಸಲಹೆ ನೀಡಲಾಗುತ್ತಿದೆ ಎಂದು ಕೃಷಿ ಇಲಾಖೆ ಜಂಟಿ ಕೃಷಿ ನಿರ್ದೇಶಕ ಮಂಜುನಾಥ್ ತಿಳಿಸಿದರು.

ಇದೇ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅವರು ರೈತರ ಸಲಹೆ ಕರ ಪತ್ರಗಳನ್ನು ಬಿಡುಗಡೆ ಮಾಡಿ, ರಸಗೊಬ್ಬರ ಮಾರಾಟ ಮಾಡುವ ಪಿಓಎಸ್ ಯಂತ್ರಗಳಿಗೆ ಚಾಲನೆ ನೀಡಿದರು. ಸಭೆಯಲ್ಲಿಜಿಲ್ಲಾಪಂಚಾಯಿತಿಮುಖ್ಯಯೋಜನಾಧಿಕಾರಿ ಗಾಯಿತ್ರಿ, ಕೃಷಿ ಉಪ ನಿರ್ದೇಶಕ ಕೆ.ಎಸ್.ಶಿವಕುಮಾರ್, ಕೃಷಿ ಇಲಾಖೆ ಜಾರಿ ದಳದ ಸಹಾಯಕ ನಿರ್ದೇಶಕರಾದ ಮಲ್ಲನಗೌಡ, ಜೆ,ಉಲ್ಪತ್ ಜೈಬ್, ಇಫ್ಕೋ ಸಂಸ್ಥೆಯ ಕ್ಷೇತ್ರಾಧಿಕಾರಿ ಚಿದಂಬರಮೂರ್ತಿ, ಜಿಲ್ಲಾ ರಸಗೊಬ್ಬರ ಮಾರಾಟಗಾರರ ಯೂನಿಯನ್ ಅಧ್ಯಕ್ಷ ಜಿ.ಪಿ.ರೇವಣ ಸಿದ್ದಪ್ಪ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.



## ತುಂಗಭದ್ರಾ ನೀರಿನ ಮಟ್ಟ

ಶುಕ್ರವಾರ : 23-05-2025

| | |
|---|---|
| ಗರಿಷ್ಠ ಮಟ್ಟ | 1633 ಅಡಿ |
| ಇಂದಿನ ಮಟ್ಟ | 1589.30 ಅಡಿ |
| ಒಳ ಹರಿವು | 6782 ಕ್ಯುಸೆಕ್ |
| ಹೊರ ಹರಿವು | 2082 ಕ್ಯುಸೆಕ್ |
| ಇಂದಿನ ಸಾಮರ್ಥ್ಯ | 10.458 ಟಿಎಂಸಿ |
| ಗರಿಷ್ಠ ಸಾಮರ್ಥ್ಯ | 105.788 ಟಿಎಂಸಿ |
| ಕಳೆದ ವರ್ಷ ಇದೇ ದಿನ | |
| ಇಂದಿನ ಮಟ್ಟ | 1577.49 ಅಡಿ |
| ಒಳ ಹರಿವು | 0 ಕ್ಯುಸೆಕ್ |
| ಹೊರ ಹರಿವು | 12 ಕ್ಯುಸೆಕ್ |
| ಸಾಮರ್ಥ್ಯ | 3.373 ಟಿಎಂಸಿ |

## ನಿತ್ಯ ಪಂಚಾಂಗ

ಮಾಸ: ವೈಶಾಖ | ಸಂವತ್ಸರ: ವಿಶ್ವಾವಸು

24-05-2025 – ಶನಿವಾರ

| | |
|---|---|
| ತಿಥಿ | : ದ್ವಾದಶಿ |
| ಪಕ್ಷ | : ಕೃಷ್ಣ |
| ನಕ್ಷತ್ರ | : ರೇವತಿ |
| ಯೋಗ | : ಆಯುಷ್ಮಾನ್ |
| ಕರಣ | : ಕೌಳವ |
| ಸೂರ್ಯೋದಯ | : 05:43:46 |
| ಸೂರ್ಯಾಸ್ತ | : 19:04:03 |
| ರಾಹು ಕಾಲ | : 09:04-10:44 |
| ಯಮಘಂಡ ಕಾಲ | : 14:04-15:44 |
| ಗುಳಿಕ ಕಾಲ | : 05:44-07:24 |

## ಮೈಕ್ರೋ ನ್ಯೂಸ್

### ಮೇ 25ರಂದು ಮುಂಗಾರು ಬೀಜ ದಿನೋತ್ಸವ

**ಹಂಪಿ ಟೈಮ್ಸ್ ರಾಯಚೂರು**

ಇಲ್ಲಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಬೀಜ ಘಟಕದ ಆವರಣದಲ್ಲಿ ಮೇ.25ರ ಬೆಳಿಗ್ಗೆ 10 ಗಂಟೆಗೆ ಮುಂಗಾರು ಬೀಜ ದಿನೋತ್ಸವ-2025 ಕಾರ್ಯಕ್ರಮವನ್ನು ಹಮ್ಮಿಕೊಳ್ಳ ಲಾಗಿದ್ದು, ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ವಿವಿಯ ಬೀಜ ಘಟಕದ ವಿಶೇಷಾಧಿಕಾರಿ ಡಾ.ಅರುಣಕುಮಾರ್ ಹೊಸಮನಿ ಕೋರಿದ್ದಾರೆ.

ಮುಂಗಾರು ಬೀಜ ದಿನೋತ್ಸವ-2025ರ ಕಾರ್ಯಕ್ರಮದಲ್ಲಿ ಮುಂಗಾರು ಬೆಳೆಗಳ ಬಗ್ಗೆ ಸಮಗ್ರ ತಾಂತ್ರಿಕ ಮಾಹಿತಿ, ಸುಧಾರಿತ ಬೀಜೋತ್ಪಾದನಾ ಮತ್ತು ರೈತರ ಸಹಭಾಗಿತ್ವದ ಬೀಜೋತ್ಪಾದನಾ ಕಾರ್ಯಕ್ರಮಗಳ ಬಗ್ಗೆ ಮಾಹಿತಿ, ವಿವಿಧ ವಿಷಯ ತಜ್ಞರು ಮತ್ತು ರೈತರ ಜೊತೆ ಚರ್ಚೆ, ಮುಂಗಾರು ಬೆಳೆಗಳ ಸುಧಾರಿತ ತಳಿಗಳ ಬೀಜ, ಜೈವಿಕ ಗೊಬ್ಬರ, ಕೀಟನಾಶಕಗಳು, ಅರಣ್ಯ, ತೋಟಗಾರಿಕೆ ಗಿಡಗಳ ಪ್ರದರ್ಶನ ಮತ್ತು ಮಾರಾಟ ಕುರಿತು ಮಾಹಿತಿ ನೀಡಲಾಗುತ್ತಿದ್ದು, ಕಾರ್ಯಕ್ರಮದಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸ ಬೇಕೆಂದು ವಿವಿಯ ಬೀಜ ಘಟಕದ ವಿಶೇಷಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

# ಯುವತಿಗೆ 18 ವರ್ಷದ ನಂತರ ಮದುವೆ

**ಮೊದಲ ಪುಟದಿಂದ**

ಮಾಡಿದ ದಿನದಿಂದಲೇ ಯಾವುದೇ ಸಣ್ಣ ಆರೋಗ್ಯ ಸಮಸ್ಯೆ ಕಂಡುಬಂದರೂ ನಿರ್ಲಕ್ಷಿಸದೇ ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಸೂಕ್ತ ಪರೀಕ್ಷೆ ಮಾಡಿಸುವ ವ್ಯವಸ್ಥೆ ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಬೇಕು ಎಂದರು.

ಇದರ ಜೊತೆಗೆ ಗರ್ಭಿಣಿಯ ಆರೋಗ್ಯದ ಸಮಸ್ಯೆಗಳನ್ನು ಸ್ಥಳೀಯ ಮಟ್ಟದ ಆಸ್ಪತ್ರೆಗಳಲ್ಲಿ ಚಿಕಿತ್ಸೆಗೆ ಸಾಧ್ಯವಾಗದಿದ್ದರೆ ಪಾಲಕರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಮನವರಿಕೆ ಮಾಡಿ ಮೇಲ್ಮಟ್ಟದ ಆಸ್ಪತ್ರೆಗೆ ಮುಂಚಿತವಾಗಿ ಮಾಹಿತಿ ನೀಡಿ ಗರ್ಭಿಣಿಯನ್ನು ಕಳುಹಿಸಿಕೊಡುವ ವ್ಯವಸ್ಥೆ ಮಾಡಬೇಕು ಎಂದರು.

ಚೊಚ್ಚಲು ಹೆರಿಗೆ, ಅಧಿಕ ರಕ್ತದೊತ್ತಡ, ಮೊದಲ ಹೆರಿಗೆ ಸಿಸೆರಿಯನ್ ಆಗಿದ್ದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಮಟ್ಟದಿಂದ ಸಕಾಲದಲ್ಲಿ ಇಲಾಖೆಯ ಆಂಬ್ಯುಲೆನ್ಸ್ ಅಥವಾ 108 ತುರ್ತು ವಾಹನ ವ್ಯವಸ್ಥೆ ಮೂಲಕ ಕಳುಹಿಸಬೇಕು. ತಾಲ್ಲೂಕ ಮಟ್ಟದಲ್ಲಿ, ಜಿಲ್ಲಾ ಮಟ್ಟದಲ್ಲಿ ಹಾಗೂ ಬಿಎಮ್‌ಸಿ ಆರ್.ಸಿ ಆಸ್ಪತ್ರೆಗಳಲ್ಲಿ ಸುಸಜ್ಜಿತ ಹೆರಿಗೆ ಸೌಲಭ್ಯ ಹಾಗೂ ನುರಿತ ವೈದ್ಯರು ಇರುವ ಕುರಿತು ಕ್ಷೇತ್ರ ಮಟ್ಟದಲ್ಲಿ ಜಾಗೃತಿ ನೀಡುವಂತೆ ತಿಳಿಸಿದರು.

ಗರ್ಭಿಣಿ ಎಂದು ತಿಳಿದ ದಿನದಿಂದಲೇ ಗರ್ಭಿಣಿಗೆ ಕಂಡು ಬರಬಹುದಾದ ಸಾಮಾನ್ಯ, ಗಂಭೀರ ಸಮಸ್ಯೆಗಳ ಕುರಿತು ಮುತುವರ್ಜಿ ವಹಿಸಲು ಕ್ಷೇತ್ರ ಮಟ್ಟದ ಸಿಬ್ಬಂದಿಯವರು ಸದಾ ತಾಯಿಯೊಂದಿಗೆ ಹಾಗೂ ಪಾಲಕರೊಂದಿಗೆ ಸಂಪರ್ಕದಲ್ಲಿರಬೇಕು. ಕಬ್ಬಿಣಾಂಶ ಮಾತ್ರೆ ಸೇವನೆಯಿಂದಾಗುವ ಪ್ರಯೋಜನ ತಿಳಿಸಬೇಕು ಎಂದರು.

ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಮಾತನಾಡಿ, ಆಸ್ಪತ್ರೆಯಲ್ಲಿ ಹೆರಿಗೆಯಾದಲ್ಲಿ ಸಹಜ ಹೆರಿಗೆ 48 ಗಂಟೆಗಳ ಕಾಲ, ಸಿಜರಿಯನ್ ಹೆರಿಗೆ ಐದು ದಿನಗಳ ಕಾಲ ಕಡ್ಡಾಯವಾಗಿ ದಾಖಲು ಮಾಡಿಕೊಂಡು ನಿರಂತರವಾಗಿ ತಾಯಿಯ ಆರೋಗ್ಯದ ಕುರಿತು ಪರಿಶೀಲಿಸಿ ವೈದ್ಯರು ಮತ್ತು ಸಿಬ್ಬಂದಿಯವರು ಯಾವುದೇ ಲೋಪವಿಲ್ಲದಂತೆ ಕರ್ತವ್ಯ ನಿರ್ವಹಿಸಲು ಸೂಚಿಸಿದರು.

ಜನನಿ ಶಿಶು ಸುರಕ್ಷಾ ಕಾರ್ಯಕ್ರಮ ಯೋಜನೆಯಡಿಯಲ್ಲಿ ದೊರಕುವ ಉಚಿತ ಊಟ, ಉಚಿತ ಔಷಧಿ, ಉಚಿತ ರಕ್ತ, ಉಚಿತ ಪರೀಕ್ಷೆ, ಉಚಿತ ನಗುಮಗು ವಾಹನ ಮೂಲಕ ಮನೆಗೆ ಬಿಡುವ ಕುರಿತು ಹಾಗೂ ಜನನಿ ಸುರಕ್ಷಾ ಯೋಜನೆಯಡಿ ಸಹಾಯಧನವನ್ನು ಅವರ ಖಾತೆಗೆ ಜಮೆ ಆಗುವ ಬಗ್ಗೆ ತಿಳಿಸಬೇಕು ಎಂದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್ ಬಸಾರೆಡ್ಡಿ, ವೈದ್ಯಕಿಯ ಅಧೀಕ್ಷಕಿ ಡಾ.ಇಂದುಮತಿ, ಪ್ರಸೂತಿ ವಿಭಾಗದ ಡಾ.ವಿರೇಂದ್ರಕುಮಾರ, ವಿಮ್ಸ್ ಮಕ್ಕಳ ವಿಭಾಗದ ಡಾ.ವಿಶ್ವನಾಥ, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಹನುಮಂತಪ್ಪ, ಜಿಲ್ಲಾ ಸರ್ವೇಕ್ಷ ಣಾಧಿಕಾರಿ ಡಾ.ಮರಿಯಂಬಿ ವಿ.ಕೆ., ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮ ಅಧಿಕಾರಿ ಡಾ.ಪೂರ್ಣಿಮಾ ಕಟ್ಟಿಮನಿ, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ. ಇಂದ್ರಾಣಿ ವಿ., ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ವಿರೇಂದ್ರ ಕುಮಾರ, ತಜ್ಞ ವೈದ್ಯರಾದ ಡಾ.ಬಾಲು ವೆಂಕಟೇಶ್, ಡಾ. ಕೊಟ್ರೇಶ್, ಡಾ.ಶ್ರೀಧರ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ ಸೇರಿದಂತೆ ತಾಲೂಕಾ ಆರೋಗ್ಯಾಧಿಕಾರಿಗಳು, ಆಡಳಿತ ವೈದ್ಯಾಧಿಕಾರಿಗಳು ಇತರರಿದ್ದರು.

# ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ : ಅರ್ಜಿ ಆಹ್ವಾನ

**ಹಂಪಿ ಟೈಮ್ಸ್ ಬಳ್ಳಾರಿ**

ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಕೇಂದ್ರ ಸರ್ಕಾರದ ಬುಡಕಟ್ಟು ಮಂತ್ರಾಲಯ ಇಲಾಖೆಯಡಿ "ಧರ್ತಿ ಆಬ ಜಂಜಾಟಿಯ ಗ್ರಾಮ ಉತ್ಕರ್ಷ ಅಭಿಯಾನ" ಕಾರ್ಯಕ್ರಮದಡಿ ಜಿಲ್ಲಾ ಮಟ್ಟದಲ್ಲಿ ಅರಣ್ಯ ಹಕ್ಕು ಕೋಶವನ್ನು ಸ್ಥಾಪಿಸಲು ಹಾಗೂ ಕೋಶಗಳಲ್ಲಿ ಕಾರ್ಯನಿರ್ವಹಿಸಲು ಅರ್ಹ ಪದವೀಧರರಿಂದ ಅರ್ಜಿ ಆಹ್ವಾನಿಸಲಾಗಿದೆ.

5 ವರ್ಷಗಳ ಕಂಪ್ಯೂಟರ್ ಜ್ಞಾನ ಅನುಭವ ಹೊಂದಿರುವ ಒಬ್ಬ ಕೋ-ಆರ್ಡಿನೇಟರ್ ಹಾಗೂ 3 ವರ್ಷ ಕಾರ್ಯ ಅನುಭವ ಇರುವ ಒಬ್ಬ ಎಮ್‌ಐಎಸ್ ಅಸಿಸ್ಟಂಟ್ ರನ್ನು ಹೊರಗುತ್ತಿಗೆ ಆಧಾರದ ಮೇಲೆ ಯೋಜನೆಯು ಪೂರ್ಣಗೊಳ್ಳುವವರೆಗೆ ನೇಮಕಾತಿ ಮಾಡಿಕೊಳ್ಳಲಾಗುವುದು.

ಅರ್ಜಿ ಸಲ್ಲಿಸಲು ಮೇ 30 ಕೊನೆಯ ದಿನ. ಆಸಕ್ತ ಅಭ್ಯರ್ಥಿಗಳು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಗೆ ಭೇಟಿ ನೀಡಿ ಅರ್ಜಿ ಪಡೆದು ಸಲ್ಲಿಸಬಹುದು. ಹೆಚ್ಚಿನ ಮಾಹಿಗಾಗಿ ದೂ.08392-242453 ಗೆ ಸಂಪರ್ಕಿಸಬಹುದು ಎಂದು ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೆಣಸಿನಕಾಯಿ ಬೆಳೆಗಾರರು, ನರ್ಸರಿ ಮಾಲೀಕರು ನಿಯಮ ಉಲ್ಲಂಘಿಸಿದಲ್ಲಿ ಕ್ರಮ : ಸಂತೋಷ ಸಪ್ಪಂಡಿ

**ಹಂಪಿ ಟೈಮ್ಸ್ ಬಳ್ಳಾರಿ**

ಜಿಲ್ಲೆಯ ಪ್ರಸಕ್ತ ಸಾಲಿನ ಮೆಣಸಿನಕಾಯಿ ಬೆಳೆಗಾರರು ಹಾಗೂ ನರ್ಸರಿ ಮಾಲೀಕರು ಉತ್ತಮ ಬೆಳೆ ಪಡೆಯಲು ಸೂಕ್ತ ಕ್ರಮ ಅನುಸರಿಸಬೇಕು ಎಂದು ತೋಟಗಾರಿಕೆ ಉಪನಿರ್ದೇಶಕ ಸಂತೋಷ ಸಪ್ಪಂಡಿ ಅವರು ತಿಳಿಸಿದ್ದಾರೆ.

ನರ್ಸರಿ ಮಾಲೀಕರು ತಮ್ಮ ನರ್ಸರಿ ಚಟುವಟಿಕೆಗಳ ನಿಯಮ ಬದ್ಧಗೊಳಿಸುವ ನಿಟ್ಟಿನಲ್ಲಿ ಕಡ್ಡಾಯವಾಗಿ ಜಿ.ಎಸ್.ಟಿ ನೋಂದಾಯಿಸಿಕೊಳ್ಳಬೇಕು. ನರ್ಸರಿ ಜಾಗ ಗುತ್ತಿಗೆ ಪಡೆದಿದ್ದಲ್ಲಿ ನಿಯಾಮನುಸಾರ ಒಡಂಬಡಿಕೆ ಮಾಡಿಸಿಕೊಳ್ಳಬೇಕು. ನರ್ಸರಿ ಮುಂಭಾಗದಲ್ಲಿ ನರ್ಸರಿಯ ಹೆಸರು ಇರುವ ನಾಮ ಫಲಕ ಅಳವಡಿಸುವುದು ಕಡ್ಡಾಯವಾಗಿದೆ ಎಂದು ಹೇಳಿದ್ದಾರೆ.



ರೈತರಿಗೆ ಉತ್ತಮ ಗುಣಮಟ್ಟ ಸಸಿಗಳನ್ನು ನೀಡಲು ಅಳವಡಿಸಿಕೊಳ್ಳಬೇಕಾದ ವೈಜ್ಞಾನಿಕ ನರ್ಸರಿ ಕ್ರಮಗಳಾದ ಸ್ಟೆರ್ಲಿಜೈಡ್, ಕೋಕೋಪಿಟ್ ಬಳಕೆ, ತರಕಾರಿ ನರ್ಸರಿಗಳಲ್ಲಿ ಕೀಟ ನಿರೋಧಕ ಬಲೆಗಳ ಬಳಕೆಯ ಬಗ್ಗೆ ಹಾಗೂ ಬೀಜೋಪಚಾರ ಕುರಿತು ಕಟ್ಟುನಿಟ್ಟಾಗಿ ಅಳವಡಿಸಿಕೊಳ್ಳಬೇಕು. ನಿಗಧಿತ ಬೆಲೆಗಿಂತ ಅಧಿಕ ಹಣ ಪಡೆದರೆ ಹಾಗೂ ನಿಯಮಗಳ ಪಾಲನೆ ಮಾಡಿದಲ್ಲಿ ಕಾನೂನು ಕ್ರಮ ಕೈಗೊಳಲಾಗುವುದು ಎಂದು ತಿಳಿಸಿದ್ದಾರೆ.

ಮೆಣಸಿನಕಾಯಿ ಬೆಳೆಗಾರರು ಕಡ್ಡಾಯವಾಗಿ ನರ್ಸರಿ ಮೆಣಸಿನಕಾಯಿ ಸಸಿಗಳನ್ನು ಜಿ.ಎಸ್.ಟಿ ನೋಂದಣಿಯಾಗಿರುವ ನರ್ಸರಿಗಳಿಂದಲೇ ಖರೀದಿಸಿ, ಪಾವತಿ ರಸೀದಿಯನ್ನು ಪಹಣಿಯಲ್ಲಿರುವ ರೈತ ಹೆಸರಿಗೆ ಪಡೆದು ನಾಟಿ ಮಾಡಬೇಕು ಹಾಗೂ ಪಡೆದಂತಹ ಪಾವತಿ ರಸೀದಿಯನ್ನು ಬೆಳೆ ಮಾರಾಟ ಆಗುವವರೆಗೂ ಭದ್ರವಾಗಿ ಇಟ್ಟುಕೊಳ್ಳಬೇಕು.

ನರ್ಸರಿಗಳಲ್ಲಿ ಮಾಲೀಕರು ತಾವು ಉಪಯೋಗಿಸುವ ಬೀಜ, ಗೊಬ್ಬರ ಮತ್ತು ಕೀಟನಾಶಕಗಳ ವಿವರಗಳನ್ನು ಕಡ್ಡಾಯವಾಗಿ ವಹಿಯಲ್ಲಿ ನಮೂದಿಸಬೇಕು. ರೈತರಿಂದ ಬೀಜ ಪಡೆದಿರುವ ಮತ್ತು ಸಸಿಗಳನ್ನು ವಿತರಿಸಿದ ದಿನಾಂಕಗಳ ವಹಿ ಸಹ ನಿರ್ವಹಿಸಬೇಕು ಎಂದು ತಿಳಿಸಿದ್ದಾರೆ.

# ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ: ವಸತಿ ನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಹಂಪಿ ಟೈಮ್ಸ್ ಬಳ್ಳಾರಿ**

ಸಂಡೂರು ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಯಶವಂತನಗರದ ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆಗೆ 1 ನೇ ತರಗತಿ ಮತ್ತು 6 ನೇ ತರಗತಿಯ ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಂದ ಪ್ರಸಕ್ತ ಸಾಲಿಗೆ ವಸತಿ ನಿಲಯ ಪ್ರವೇಶಾತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಇದೇ ವಸತಿ ಶಾಲೆಯಲ್ಲಿ ಪಡೆದು ಭರ್ತಿ ಮಾಡಿ ಜೂ 06 ರೊಳಗಾಗಿ ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂ.08395-200073 ಗೆ ಸಂಪರ್ಕಿಸಬಹುದು ಎಂದು ಸಂಡೂರು ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹಂಪಿ ಟೈಮ್ಸ್
ವಿಜಯನಗರದ ಹೆಮ್ಮೆ
ಕನ್ನಡ ದಿನಪತ್ರಿಕೆ
SSLC ವಿದ್ಯಾರ್ಥಿಗಳಿಗಾಗಿ
ಹೈಸ್ಕೋರ್ ಮತ್ತು ಸರಳ ಅಭ್ಯಾಸಕ್ಕೆ ತಜ್ಞ ಶಿಕ್ಷಕರಿಂದ ಸುಲಭ ಅಂಶಗಳು ನಿಮ್ಮ ಹಂಪಿ ಟೈಮ್ಸ್ ದಿನಪತ್ರಿಕೆಯಲ್ಲಿ
scan to read epaper
9 ಜುಲೈ 2024 ರಿಂದ ಪ್ರತಿದಿನ
ನಿಮ್ಮ ಮೊಬೈಲ್‌ನಲ್ಲಿ ಸ್ಕ್ಯಾನ್ ಮಾಡಿ ಇನ್ಸ್ಟಾಲ್ ಮಾಡಿಕೊಳ್ಳಿ!

14 ಭಾಷೆಗಳಲ್ಲಿ
ಹಂಪಿ ಟೈಮ್ಸ್ ವೆಬ್‌ನ್ಯೂಸ್‌ಗೆ ಭೇಟಿ ನೀಡಿ, ನಿಮ್ಮ ಮಾತೃಭಾಷೆಯಲ್ಲಿ ಸುದ್ದಿ, ಲೇಖನ ಓದಿರಿ...
www.hampitimes.com